ಸಂಪುಟ : 9 ಸಂಚಿಕೆ 299 ಪುಟ : 4+2 ಬೆಲೆ: 3.00 ಶುಕ್ರವಾರ ಜನವರಿ 10 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 299 Pages : 4+2 Price : 3.00 Friday January 10 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಕಳೆದ ಹಲವು ದಿನಗಳಿಂದ ಗದಗ-ಬೆಟಗೇರಿ ಅವಳಿ ನಗರದಲ್ಲಿ ಕುಡಿಯುವ ನೀರು ಪೂರೈಕೆ ಸ್ಥಗಿತಗೊಂಡಿತ್ತು. ಇಂದಿನಿಂದ ಮತ್ತೆ ಕುಡಿಯುವ ನೀರು ಪೂರೈಕೆಯ ಮಾಹಿತಿಯನ್ನು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜನವರಿ10 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

**ಸ್ಥಳಗಳ ವಿವರ:** ವಾರ್ಡ್ ನಂ. 01ರಲ್ಲಿ ಎಸ್.ಎಮ್.ಕೃಷ್ಣ ನಗರದ ಪೂರ್ತಿ ಭಾಗಗಳು, . ವಾರ್ಡ್ ನಂ. 21, – ಖಾನತೋಟ ಭಾಗ, ಹುಲಿಗೆಮ್ಮನ ಗುಡಿ, ಗಂಜಿ ಬಸವೇಶ್ವರ ಸರ್ಕಲ್, ಮಳವಳ್ಳಿ ಪ್ಲಾಟ್, ಅಕ್ಕಿ ಪ್ಲಾಟ್‌ನ ಲೈನ್, ವಾರ್ಡ್ ನಂ. 35 – ಹೊಸ ಕೋರ್ಟ್, ಡಿ.ಸಿ. ಆಫೀಸ್ ಹಿಂದಿನ ಭಾಗಗಳು ಹಾಗೂ ಉಳಿದ ಕೆಲವು ಭಾಗಗಳು.

**ಪ್ರಕಟಣೆ :** ಯಾವತ್ತೂ ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತಮ್ಮ ನೀರಿನ ಕರವನ್ನು ತುಂಬಲು ನಗರಸಭೆ ಪ್ರಕಟಣೆಯ ಮೂಲಕ ತಿಳಿಸಿದೆ. ಒಂದು ವೇಳೆ ಬಾಕಿ ಉಳಿದ ನೀರಿನ ಬಿಲ ತುಂಬದೇ ಹೋದರೆ, ನಳಗಳನ್ನು ಬಂದ ಮಾಡಲಾಗುತ್ತದೆ. ಆದ ಕಾರಣ ನೀರಿನ ಕರವನ್ನು ತುಂಬಲು ಗದಗ-ಬೆಟಗೇರಿ ನಗರಸಭೆ ಅಧಿಕಾರಿಗಳು ಪ್ರಕಟಣೆ ಮೂಲಕ ಸಾರ್ವಜನಿಕರಿಗೆ ತಿಳಿಸಿದ್ದಾರೆ.

## ವಿಶೇಷ ಬಸ್ಸುಗಳ ಸಂಚಾರ

■ ವಿಜಯಸಾಕ್ಷಿ ಸುದ್ದಿ, ಗದಗ

2025 ನೇ ಸಾಲಿನ ಸಂಕ್ರಾಂತಿ ಹಬ್ಬದ ಪ್ರಯುಕ್ತ ಸಾರ್ವಜನಿಕರು ತಮ್ಮ ಸ್ವಂತ ಊರುಗಳಿಗೆ ತೆರಳುವುದರಿಂದ, ವಾ.ಕ.ರ.ಸಾ.ಸಂಸ್ಥೆಯ ವ್ಯಾಪ್ತಿಯ ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರ ಕನ್ನಡ, ಹಾವೇರಿ, ಚಿಕ್ಕೋಡಿ ಮತ್ತು ಬಾಗಲಕೋಟೆ ವಿಭಾಗಗಳಿಂದ ಸುಮಾರು 114 ಹೆಚ್ಚುವರಿ ವಿಶೇಷ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಜ. 10 ರಂದು ಶುಕ್ರವಾರ ವಾರಾಂತ್ಯ, ಜ. 11 ರಂದು ಎರಡನೇ ಶನಿವಾರ ಹಾಗೂ ಜ. 12 ರಂದು ರವಿವಾರ ಇದ್ದು, ಜ.14 ರಂದು ಮಂಗಳವಾರ ಸಂಕ್ರಾಂತಿ ಹಬ್ಬ ಇರುವದರಿಂದ ಬೆಂಗಳೂರು ಮತ್ತು ಇತರೆ ಪ್ರಮುಖ ಸ್ಥಳಗಳಿಂದ ಹೆಚ್ಚಿನ ಪ್ರಯಾಣಿಕರು ತಮ್ಮ ತಮ್ಮ ಊರುಗಳಿಗೆ ತೆರಳಲು ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುವುದು.

ಬೆಂಗಳೂರಿನಿಂದ ರಾಜ್ಯ/ಅಂತರ ರಾಜ್ಯದ ವಿವಿಧ ಸ್ಥಳಗಳಿಗೆ ತೆರಳಲು ಜನವರಿ 10, 11, ಹಾಗೂ 13 ರಂದು ಹೆಚ್ಚುವರಿ ವಿಶೇಷ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ. ಹಬ್ಬ ಮುಗಿದ ಮೇಲೆ ಜನವರಿ 14 ಹಾಗೂ 15 ರಂದು ಮತ್ತು ನಂತರದ ದಿನಗಳಂದು ಪ್ರಮುಖ ಸ್ಥಳಗಳಿಂದ ಜನದಟ್ಟಣೆಗೆ ಅನುಗುಣವಾಗಿ ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸ ಲಾಗುವುದು.

ವಿಶೇಷ ಸಾರಿಗೆಗಳ ಸದುಪಯೋಗ ಪಡಿಸಿಕೊಳ್ಳುವದರೊಂದಿಗೆ, ಸುಖಕರ ಹಾಗೂ ಸುರಕ್ಷಿತ ಪ್ರಯಾಣಕ್ಕಾಗಿ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಸುವಂತೆ ಮತ್ತು ವಿಶೇಷ ಹೆಚ್ಚುವರಿ ಸಾರಿಗೆಗಳ ಸದುಪಯೋಗ ಪಡೆದುಕೊಳ್ಳುವಂತೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಕಟಣೆಯಲ್ಲಿ ತಿಳಿಸಿದೆ.

### ಗಣರಾಜ್ಯೋತ್ಸವ ದಿನಾಚರಣೆ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

# ಶಿಸ್ತುಬದ್ಧ ಆಚರಣೆಗೆ ಆದ್ಯತೆ ನೀಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಜನವರಿ 26ರಂದು ಜರುಗಲಿರುವ ಗಣರಾಜ್ಯೋತ್ಸವ ದಿನಾಚರಣೆಯನ್ನು ಶಿಸ್ತುಬದ್ಧ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜರುಗಿದ ಗಣರಾಜ್ಯೋತ್ಸವ ದಿನಾಚರಣೆ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ಮಟ್ಟದ ಗಣರಾಜ್ಯೋತ್ಸವ ದಿನಾಚರಣೆಗೆ ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು, ಆಯಾ ಸಮಿತಿಯವರು ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸಬೇಕು. ಕಾರ್ಯಕ್ರಮದಲ್ಲಿ ಯಾವುದೇ ಲೋಪದೋಷಗಳಿಗೆ ಆಸ್ಪದ ನೀಡದೇ ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸುವಂತೆ ನಿರ್ದೇಶನ ನೀಡಿದರು.





ಗಣರಾಜ್ಯೋತ್ಸವ ದಿನದಂದು ಸರ್ಕಾರ ರಜೆ ನೀಡುವುದು ಗಣರಾಜ್ಯೋತ್ಸವ ಆಚರಣೆಗಾಗಿ ಎಂಬುದನ್ನು ಅಧಿಕಾರಿಗಳು ಹಾಗೂ ಇಲಾಖಾ ಸಿಬ್ಬಂದಿಗಳು ಗಮನದಲ್ಲಿಟ್ಟುಕೊಂಡು ಗಣರಾಜ್ಯೋತ್ಸವ ಹಬ್ಬವನ್ನು ಅತ್ಯಂತ ಸಂಭ್ರಮ, ಸಡಗರದಿಂದ ಆಚರಿಸಲು ಒಗ್ಗಟ್ಟಾಗಿ ಪಾಲ್ಗೊಳ್ಳಬೇಕು. ಗಣರಾಜ್ಯೋತ್ಸವ ದಿನಾಚರಣೆ ಅಂಗವಾಗಿ ಕಾರ್ಯಕ್ರಮದ ಹಿಂದಿನ ದಿನ ಹಾಗೂ ಕಾರ್ಯಕ್ರಮದ ದಿನ ಸರ್ಕಾರಿ ಕಚೇರಿ ಹಾಗೂ ನಗರದ ವಿವಿಧ ವೃತ್ತಗಳಲ್ಲಿ ಸ್ವಚ್ಛತೆಯೊಂದಿಗೆ ವಿದ್ಯುತ್ ದೀಪಾಲಂಕಾರಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಗಣರಾಜ್ಯೋತ್ಸವ ವ್ಯವಸ್ಥಿತ ಆಚರಣೆಗಾಗಿ ವಿವಿಧ ಇಲಾಖೆಯ ಅಧಿಕಾರಿಗಳು ಪರಸ್ಪರ ಸಮನ್ವಯತೆಯಿಂದ ಹಾಗೂ ಶ್ರದ್ಧೆಯಿಂದ ಕಾರ್ಯನಿರ್ವಹಿಸುವುದು ಮುಖ್ಯವಾಗಿದೆ. ಇಲಾಖಾಧಿಕಾರಿಗಳಿಗೆ ಗಣರಾಜ್ಯೋತ್ಸವದ ಆಚರಣೆ ಕುರಿತಂತೆ ವಹಿಸಲಾಗಿರುವ ಜವಾಬ್ದಾರಿಯನ್ನು ಸರಿಯಾಗಿ ನಿಭಾಯಿಸುವ ಮೂಲಕ ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸುವಂತೆ ಸೂಚಿಸಿದರು.

ಗಣರಾಜ್ಯೋತ್ಸವ ದಿನದಂದು ಎಲ್ಲ ಕಚೇರಿ ಮತ್ತು ಶಾಲಾ ಕಾಲೇಜುಗಳ ಸಿಬ್ಬಂದಿ ತಮ್ಮ ಕಾರ್ಯಾಲಯದ ಧ್ವಜಾರೋಹಣವನ್ನು ಬೆಳಿಗ್ಗೆ 7.30ರೊಳಗೆ ನೆರವೇರಿಸಿ ಬೆಳಿಗ್ಗೆ 8.30 ಗಂಟೆಗೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಹಾಜರಾಗಬೇಕು. ಅಂದು ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಿಂದ ಸಾರ್ವಜನಿಕ ಧ್ವಜಾರೋಹಣ ಕಾರ್ಯಕ್ರಮ ಜರುಗಲಿದ್ದು, ಎಲ್ಲ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಕಡ್ಡಾಯವಾಗಿ ಹಾಜರಿರಬೇಕು ಎಂದು ಸೂಚಿಸಿದರು.

> ಕಾರ್ಯಕ್ರಮದ ಸ್ಥಳದ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಕಾರ್ಯಕ್ರಮ ಮುಗಿದ ನಂತರವೂ ಸಹ ಆ ಸ್ಥಳ ಮೊದಲಿನ ಹಾಗೆ ಸ್ವಚ್ಛವಾಗಿರುವಂತೆ ಸಂಬಂಧಿತ ಅಧಿಕಾರಿಗಳು ನಿಗಾ ವಹಿಸಬೇಕು. ಅತಿಥಿಗಳಿಗೆ ಆಸನದ ವ್ಯವಸ್ಥೆ, ಅಲ್ಪೋಪಹಾರದ ವ್ಯವಸ್ಥೆ ಕುರಿತು ಕ್ರಮ ಕೈಗೊಳ್ಳಬೇಕು. ವಿವಿಧ ರಂಗಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನಿಸುವ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಕಾರ್ಯಕ್ರಮದ ಕುರಿತು ಮುದ್ರಿಸಲಾಗುವ ಆಮಂತ್ರಣ ಪತ್ರಿಕೆಗಳನ್ನು ಶಿಷ್ಟಾಚಾರದ ಪ್ರಕಾರ ಮುದ್ರಿಸಿ ಗಣ್ಯರುಗಳಿಗೆ ಸಾಕಷ್ಟು ಸಮಯ ಮುಂಚಿತವಾಗಿ ತಲುಪಿಸಿ ಕಾರ್ಯಕ್ರಮಕ್ಕೆ ಆಹ್ವಾನಿಸಬೇಕು. ಕಾರ್ಯಕ್ರಮದಲ್ಲಿ ಶಿಷ್ಟಾಚಾರ ಉಲ್ಲಂಘನೆಯಾಗದಂತೆ ನಿಗಾವಹಿಸಬೇಕು.
>
> – ಸಿ.ಎನ್. ಶ್ರೀಧರ್.
> **ಜಿಲ್ಲಾಧಿಕಾರಿಗಳು, ಗದಗ.**

▸▸ 3ನೇ ಪುಟಕ್ಕೆ

### ರಾಷ್ಟ್ರೀಯ ಯುವ ದಿನಾಚರಣೆ ನಿಮಿತ್ತ 'ಅಟಲ್ ಟ್ರೋಫಿ-2025' ಕಬಡ್ಡಿ ಪಂದ್ಯಾವಳಿ

# ನಿರ್ಣಾಯಕರ ನಿರ್ಧಾರಕ್ಕೆ ಬದ್ಧರಾಗಿರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಯುವಕ-ಯುವತಿಯರು ಇತಿಹಾಸವನ್ನು ತಿಳಿದುಕೊಳ್ಳಬೇಕು. ಇಲ್ಲವಾದಲ್ಲಿ ಇತಿಹಾಸವನ್ನು ಸೃಷ್ಟಿಸಲು ಸಾಧ್ಯವಿಲ್ಲ. ಕ್ರೀಡೆ ಜೀವನಕ್ಕೆ ಅತಿ ಅಮೂಲ್ಯವಾದದ್ದು. ಎಲ್ಲರೂ ಕ್ರೀಡೆಯಲ್ಲಿ ಭಾಗವಹಿಸಿ ಮತ್ತು ನಿರ್ಣಾಯಕರ ನಿರ್ಧಾರದಲ್ಲಿ ಬದ್ಧರಾಗಿರಬೇಕು ಎಂದು ಮಾಜಿ ಸಚಿವ ಕಳಕಪ್ಪ ಜಿ.ಬಂಡಿ ಅಭಿಪ್ರಾಯಪಟ್ಟರು.

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲೆಯ ಯುವ ಮೋರ್ಚಾ ವತಿಯಿಂದ ಸ್ವಾಮಿ ವಿವೇಕಾನಂದರ ಜಯಂತ್ಯುತ್ಸವ, ಭಾರತದ ಹೆಮ್ಮೆಯ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮ ಶತಮಾನೋತ್ಸವದ ಅಂಗವಾಗಿ ಜ.8 ಹಾಗೂ 9ರಂದು ಹಮ್ಮಿಕೊಂಡಿದ್ದ ಕಬಡ್ಡಿ ಪಂದ್ಯಾವಳಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿ.ಪ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ನಮ್ಮ ನೆಲದ ಸಂಸ್ಕೃತಿಯ ಅರಿವು ಮೂಡಿಸಲು ಕಬಡ್ಡಿ ಪಂದ್ಯಾವಳಿ ಸಹಕಾರಿಯಾಗಿದೆ. ಸ್ವಾಮಿ ವಿವೇಕಾನಂದರು ಹೇಳಿದಂತೆ, ಎಲ್ಲಾ ಅನಂತ ಶಕ್ತಿ ನಿಮ್ಮಲ್ಲಿ ಇದೆ. ನೀವು ಏನು ಬೇಕಾದರೂ ಮಾಡಬಹುದು. ಯುವಕರಾದ ನೀವೆಲ್ಲರೂ ಈ ವಯೋಮಿತಿಯಲ್ಲಿ ಏನು ಬೇಕಾದರೂ ಸಾಧನೆ ಮಾಡಬಹುದು. ಅದಕ್ಕಾಗಿ ಎಲ್ಲಾ ಯುವಕ-ಯುವತಿಯರು ಕ್ರೀಡೆಯಲ್ಲಿ ಕಡ್ಡಾಯವಾಗಿ ಭಾಗವಹಿಸಬೇಕೆಂದು ತಿಳಿಸಿದರು.




ಜಿಲ್ಲಾ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಸಂತೋಷ್ ಅಕ್ಕಿ ಮಾತನಾಡಿ, ಧೈರ್ಯ, ಸಾಹಸ, ಒಗ್ಗಟ್ಟಿನ ಗುಣಗಳನ್ನು ಜೀವನದಲ್ಲಿ ಎದುರಿಸಲು ಕಬಡ್ಡಿಯಂತಹ ಕ್ರೀಡೆಗಳ ಮೂಲಕ ಸಾಧ್ಯವಾಗಿಸಬಹುದು ಎಂದರು.

> ಕಬಡ್ಡಿ ಪಂದ್ಯಾವಳಿಯಲ್ಲಿ ರೋಣ, ಮುಂಡರಗಿ, ನರಗುಂದ, ಲಕ್ಕುಂಡಿ, ಗಜೇಂದ್ರಗಡ, ಗದಗ ಮುಂತಾದ ಗ್ರಾಮೀಣ ಪ್ರದೇಶಗಳಿಂದ 30ಕ್ಕೂ ಹೆಚ್ಚು ಕಬಡ್ಡಿ ತಂಡಗಳು ಪಾಲ್ಗೊಂಡು ಬಿರುಸಿನ ಕಬಡ್ಡಿ ಆಟವನ್ನು ಪ್ರದರ್ಶಿಸಿದರು.

ಪಂದ್ಯಾವಳಿಯ ಉದ್ಘಾಟನಾ ಸಮಾರಂಭದಲ್ಲಿ ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಎಂ.ಎಸ್. ಕರಿಗೌಡ್ರು, ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಸಿದ್ದು ಪಲ್ಲೇದ, ನಗರಸಭೆ ಸದಸ್ಯರಾದ ಅನಿಲ್ ಅಬ್ಬಿಗೇರಿ, ಮುತ್ತಣ್ಣ ಕಡಗದ, ರವಿ ಕರಿಗಾರ, ಬಸವರಾಜ ಸಂಗನಾಳ, ರಾಜೇಶ್ ಕಟ್ಟಿಮನಿ, ನವೀನ್ ಕುರ್ತಕೋಟಿ, ದಿಂಡೂರ್, ಸಚಿನ್ ಮಡಿವಾಳರ, ಬಸವರಾಜ ನರೇಗಲ್, ರೋಹನ್ ಕುಮಾರ್ ಕುಂದನಹಳ್ಳಿ, ಚೆನ್ನು ಪಟೇಲ್, ಸಂತೋಷ್ ಚಾವೂರ, ಕಿರಣ್ ಕಟ್ಟಿಮನಿ ಮುಂತಾದವರು ಉಪಸ್ಥಿತರಿದ್ದರು.

### ಬಾಲಕಾರ್ಮಿಕ ಪದ್ಧತಿ ವಿರೋಧಿ ಜನಜಾಗೃತಿ

## ಸಂಚಾರಿ ವಾಹನಕ್ಕೆ ಜಿಲ್ಲಾಧಿಕಾರಿಗಳಿಂದ ಚಾಲನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಬಾಲಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿ ಗದಗ ಇವರ ಸಂಯುಕ್ತ ಆಶ್ರಯದಲ್ಲಿ ಗುರುವಾರ ಜಿಲ್ಲಾಡಳಿತ ಭವನದ ಆವರಣದಲ್ಲಿ ಬಾಲ ಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ವಿರೋಧಿ ಜನಜಾಗೃತಿ ಸಂಚಾರಿ ವಾಹನಕ್ಕೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳು ಮಾತನಾಡಿ, 1986ರ ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ನಿಷೇಧ ಮತ್ತು ನಿಯಂತ್ರಣ ತಿದ್ದುಪಡಿ ಕಾಯ್ದೆ 2016ರ ಪ್ರಕಾರ 14 ವರ್ಷದ ಮೇಲ್ಪಟ್ಟ ಹಾಗೂ 18 ವರ್ಷ ಒಳಗಿನ ಕಿಶೋರ ಕಾರ್ಮಿಕರನ್ನು ಅಪಾಯಕಾರಿ ಉದ್ಯಮದಲ್ಲಿ ಹಾಗೂ 14 ವರ್ಷದ ಒಳಗಿನ ಮಕ್ಕಳನ್ನು ಯಾವುದೇ ಕೆಲಸಕ್ಕೆ ನೇಮಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗಿದೆ. ಒಂದು ವೇಳೆ ನೇಮಿಸಿಕೊಂಡಲ್ಲಿ ಕನಿಷ್ಠ 20000ದಿಂದ ಗರಿಷ್ಠ 50000 ರೂ.ವರೆಗೆ ದಂಡ ಹಾಗೂ 6 ತಿಂಗಳಿಂದ 3 ವರ್ಷದವರೆಗೆ ಜೈಲು ಶಿಕ್ಷೆ ವಿಧಿಸಲು ಅವಕಾಶವಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕಾರ್ಮಿಕ ಅಧಿಕಾರಿಗಳಾದ ಶ್ರೀಶೈಲ್ ಸೊಮನಕಟ್ಟಿ, ಬಾಲಕಾರ್ಮಿಕ ಯೋಜನಾ ಸೊಸೈಟಿಯ ಯೋಜನಾ ನಿರ್ದೇಶಕರಾದ ಸಂದೇಶ ಪಾಟೀಲ, ಕಾರ್ಮಿಕ ನಿರೀಕ್ಷಕರಾದ ಉಮೇಶ ಹುಲ್ಲಣ್ಣವರ, ಸುಶ್ಮಾ, ಫಕಿರಪ್ಪ ಹಡಗಲಿ ಹಾಗೂ ಕಾರ್ಮಿಕ ಇಲಾಖೆಯ ಸಿಬ್ಬಂದಿಗಳು ಪಾಲ್ಗೊಂಡಿದ್ದರು. ಸದರಿ ವಾಹನವು ಜಿಲ್ಲೆಯಾದ್ಯಂತ 15 ದಿನಗಳವರೆಗೆ ಸಂಚರಿಸಲಿದೆ.

### ಅ.ಭಾ.ವೀ ಮಹಾಸಭಾ ಗದಗ ಘಟಕದ ಮಾಸಿಕ ಸಭೆ, ದಿನದರ್ಶಿಕೆ ಬಿಡುಗಡೆ

# ಮಹಾಸಭಾದ ಉದ್ದೇಶಗಳು ಸಾಕಾರಗೊಳ್ಳಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಹಾನಗಲ್ ಕುಮಾರೇಶ್ವರ ಮಹಾಸ್ವಾಮಿಗಳು ಸ್ಥಾಪಿಸಿದ ಅಖಿಲ ಭಾರತ ಲಿಂಗಾಯತ ಮಹಾಸಭಾದ ಉದ್ದೇಶಗಳು ಸಾಕಾರಗೊಳ್ಳಲು, ಸಮಾಜ ಸನ್ಮಾರ್ಗದಲ್ಲಿ ಮುನ್ನಡೆಯಲು ಎಲ್ಲ ಒಳಪಂಗಡಗಳನ್ನು ಒಗ್ಗೂಡಿಸಿಕೊಂಡು ಮುನ್ನಡೆಯುವದು ಎಂದಿಗಿಂತ ಇಂದು ಅವಶ್ಯವಿದೆ ಎಂದು ಹೊಸಳ್ಳಿಯ ಬೂದೀಶ್ವರ ಸಂಸ್ಥಾನಮಠದ ಪೂಜ್ಯ ಅಭಿನವ ಬೂದೀಶ್ವರ ಮಹಾಸ್ವಾಮಿಗಳು ಹೇಳಿದರು.

ಅವರು ಗುರುವಾರ ಗದಗ ತಾಲೂಕಿನ ಹೊಳ್ಳಿಯ ಬೂದೀಶ್ವರ ಸಂಸ್ಥಾನಮಠದಲ್ಲಿ ಅಖಿಲ ಭಾರತ ಲಿಂಗಾಯತ ಮಹಾಸಭಾ ಗದಗ ಜಿಲ್ಲಾ ಘಟಕದ ಮಾಸಿಕ ಸಭೆ ಹಾಗೂ ನೂತನ ವರ್ಷದ ದಿನದರ್ಶಿಕೆಯ ಬಿಡುಗಡೆ ಸಮಾರಂಭದ ಸಾನ್ನಿಧ್ಯ ವಹಿಸಿ, ದಿನದರ್ಶಿಕೆ ಬಿಡುಗಡೆಗೊಳಿಸಿ ಮಾತನಾಡಿದರು.



ಎಲ್ಲರೂ ಧರ್ಮವಂತರಾಗಬೇಕು, ಧರ್ಮದ ಹಾದಿಯಲ್ಲಿ ಮುನ್ನಡೆಯಬೇಕು, ಮಕ್ಕಳಿಗೆ ಒಳ್ಳೆಯ ಸಂಸ್ಕಾರ, ಸಂಸ್ಕೃತಿಯನ್ನು ರೂಢಿಸಿ ಉತ್ತಮ ಶಿಕ್ಷಣ ನೀಡಬೇಕು. ವೀರಶೈವ, ಲಿಂಗಾಯತರೆಲ್ಲರೂ ಲಿಂಗವನ್ನು ಧರಿಸಬೇಕೆಂದರು.

ಗದುಗಿನಲ್ಲಿ ಮಹಾಸಭಾದ ಉದ್ದೇಶಿತ ಸಮುದಾಯ ಭವನ ನಿರ್ಮಾಣದ ಕಟ್ಟಡ ಕಾಮಗಾರಿಯನ್ನು ತೀವ್ರಗೊಳಿಸಿ ಸಾಧ್ಯವಾದಷ್ಟು ಬೇಗ ಪೂರ್ಣಗೊಳಿಸಬೇಕು. ಅದಕ್ಕೆ ಬೇಕಿರುವ ಎಲ್ಲ ರೀತಿಯ ಸಂಪನ್ಮೂಲಗಳನ್ನು ಕ್ರೋಢೀಕರಣ ಮಾಡಿಕೊಂಡು ಸಮಾಜದ ಸದ್ಬಳಕೆ ಉಪಯೋಗ ಮಾಡಿಕೊಳ್ಳಲು ಜಿಲ್ಲಾ ಮತ್ತು ತಾಲೂಕ ಘಟಕಗಳ ಪದಾಧಿಕಾರಿಗಳು ಕಂಕಣಬದ್ಧರಾಗಬೇಕು ಎಂದು ಆಶೀರ್ವದಿಸಿದರು.

> ಮಹಾಸಭಾದ ಜಿಲ್ಲಾ ಘಟಕದ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಸರ್ವರನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ, ಈಗಾಗಲೇ ಸದಾಶಿವಯ್ಯ ಮದರಿಮಠ ಅವರು ಕಟ್ಟಡ ನಿರ್ಮಾಣದ ಉಸ್ತುವಾರಿಯನ್ನು ವಹಿಸಿಕೊಂಡು ಪೂರಕ ಸಿದ್ಧತೆಗಳನ್ನು ಮಾಡಿಕೊಂಡಿದ್ದಾರೆ. ಫೆಬ್ರುವರಿ 9ರಂದು ಮಹಾಸಭಾದ ರಾಜ್ಯ ಅಧ್ಯಕ್ಷ ಶಂಕರ ಬಿದರಿ ಅವರು ಗದುಗಿಗೆ ಆಗಮಿಸಿ ಸಮಾಜ ಸಂಘಟನೆ, ಮುಂದಿನ ಕಾರ್ಯಯೋಜನೆಗಳ ಕುರಿತು ಮಾರ್ಗದರ್ಶನ ಮಾಡಲಿದ್ದಾರೆ. ಅಂದಿನ ಕಾರ್ಯಕ್ರಮದ ರೂಪುರೇಷೆಗಳನ್ನು ಸಿದ್ಧಪಡಿಸಲು ಶೀಘ್ರದಲ್ಲಿ ಸಭೆ ಜರುಗಿಸುವದಾಗಿ ಹೇಳಿದರು.

ಸದಾಶಿವಯ್ಯ ಮದರಿಮಠ ಸಂದರ್ಭೋಚಿತವಾಗಿ ಮಾತನಾಡಿದರು. ಕೊನೆಗೆ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಮುರುಘರಾಜೇಂದ್ರ ಬಡ್ನಿ ವಂದಿಸಿದರು.

ಈ ಸಂದರ್ಭದಲ್ಲಿ ಮಹಾಸಭಾದ ರಾಜ್ಯ ಕಾರ್ಯಕಾರಿಣಿ ಸಮಿತಿಯ ಸದಸ್ಯ ಸಂಗನಗೌಡ ಪಾಟೀಲ ಸೇರಿದಂತೆ ಗದಗ ಜಿಲ್ಲಾ ಘಟಕದ ಹಾಗೂ ಜಿಲ್ಲೆಯ ಎಲ್ಲಾ ತಾಲೂಕು ಘಟಕಗಳ ಪದಾಧಿಕಾರಿಗಳು, ಕಾರ್ಯಕಾರಿಣಿ ಮಂಡಳಿ ಸದಸ್ಯರು ಉಪಸ್ಥಿತರಿದ್ದರು.

## ಸಂಪಾದಕೀಯ

# ಸೈಬರ್ ಕ್ರೈಂ ತಡೆಯಲು ವಿವೇಚನೆಯೇ ಪರಿಹಾರ

ಆಧುನಿಕ ಜಗತ್ತಿನಲ್ಲಿ ಸೈಬರ್ ಕ್ರೈಂ ಜಾಗತಿಕ ಸಮಸ್ಯೆಯಾಗಿ ಬದಲಾಗಿದೆ. ಸೈಬರ್ ಕ್ರೈಂ ಸೀಮಾತೀತ. ಅಂದರೆ ಜಗತ್ತಿನ ಯಾವುದೇ ಒಂದು ಮೂಲೆಯಿಂದ ಇನ್ನೊಂದು ದೇಶದಲ್ಲಿ ಕನ್ನ ಹಾಕಬಹುದಾದಂತಹ ಅಪರಾಧವಾಗಿದೆ. ಇಂತಹ ಸೈಬರ್ ಅಪರಾಧಗಳನ್ನು ಪತ್ತೆ ಹಚ್ಚುವುದು ಪೊಲೀಸರಿಗೆ ಬಹುದೊಡ್ಡ ಸವಾಲಿನ ಕೆಲಸವಾಗಿದೆ.

ಸೈಬರ್ ಕ್ರೈಂ ತಡೆಯಲು ಮತ್ತು ಸೈಬರ್ ಅಪರಾಧಗಳನ್ನು ಪತ್ತೆ ಹಚ್ಚುವುದಕ್ಕಾಗಿ ಪೊಲೀಸ್ ಇಲಾಖೆಯಲ್ಲಿ ವಿಶೇಷ ಘಟಕವೇ ಇದೆ. ಅನೇಕ ಹೊಸ ಕಾನೂನುಗಳನ್ನು ಜಾರಿಗೊಳಿಸಲಾಗಿದೆ. ಆದರೂ ಸೈಬರ್ ಕ್ರೈಂ ಸಂಖ್ಯೆಯಲ್ಲಿ ಯಾವುದೇ ಕಡಿಮೆಯಾಗಿಲ್ಲ.

ಪೊಲೀಸ್ ಇಲಾಖೆ ಮತ್ತು ಹಣಕಾಸು ಸಂಸ್ಥೆಗಳು ಸಾಕಷ್ಟು ಜನ ಜಾಗೃತಿ ನಡೆಸಿದರು ಅನೇಕ ಸುಶಿಕ್ಷಿತರೇ ಈ ಸೈಬರ್ ಗೆ ಒಳಗಾಗುತ್ತಿದ್ದಾರೆ. ದುಬಾರಿ ಉಡುಗೊರೆ, ಅತ್ಯಂತ ಸುಲಭವಾಗಿ ಹಣ ಗಳಿಕೆಯ ಮಾರ್ಗೋಪಾಯಗಳನ್ನು ಕೊಟ್ಟು ಜನರನ್ನ ವಂಚಿಸಲಾಗುತ್ತಿದೆ. ಒಂದು ಕ್ಷಣ ವಿವೇಚನೆ ಕಳೆದುಕೊಂಡು ಅವರ ಜಾಲಕ್ಕೆ ಸಿಲುಕಿದರೆ, ಬೆವರು ಸುರಿಸಿ ದುಡಿದ ಹಣವೆಲ್ಲ ಯಾರದು ಪಾಲಾಗುತ್ತದೆ.

ಹಣ ಗಳಿಕೆಯ ಮನುಷ್ಯನ ದುರ್ಬಲವನ್ನೇ ಬಂಡವಾಳ ಮಾಡಿಕೊಂಡಿರುವ ಈ ಸೈಬರ್ ಖದೀಮರು, ಪ್ರತಿಯೊಬ್ಬರನ್ನ ಹೊಂದಿಲ್ಲ ಒಂದು ರೀತಿಯಲ್ಲಿ ಆಕರ್ಷಿಸಲು ಪ್ರಯತ್ನಿಸುತ್ತಲೇ ಇದ್ದಾರೆ. ಅದರಲ್ಲಿ ಕೆಲವೊಬ್ಬರಾದರೂ ಅವರ ಜಾಲಕ್ಕೆ ಸಿಲುಕಿ ಸಂಕಷ್ಟಕ್ಕೆ ಒಳಗಾಗುವುದು ಸಾಮಾನ್ಯವಾಗಿದೆ.

ಈ ಸೈಬರ್ ವಂಚನೆ ತಡೆಯಲು ಯಾವುದೇ ಕಾನೂನಿನಿಂದ ಸಾಧ್ಯವೇ ಇಲ್ಲ. ವಿದೇಶದಲ್ಲಿ ಕುಳಿತ ವ್ಯಕ್ತಿ ಒಬ್ಬ ಭಾರತದ ಒಬ್ಬ ವ್ಯಕ್ತಿಗೆ ಮೋಸ ಮಾಡಿದರೆ, ಭಾರತದ ಪೊಲೀಸರು ಅಲ್ಲಿಗೆ ಹೋಗಿ ಅವನಿಂದ ಹಣ ಮರಳಿ ಪಡೆದುಕೊಂಡು ಬರುವುದು ಅಷ್ಟು ಸುಲಭದ ಮಾತು ಅಲ್ಲ. ಹೀಗಾಗಿ ಇಂತಹ ವಂಚನೆ ತಡೆಗೆ ವಿವೇಚನೆ ಮೊದಲ ಪರಿಹಾರ.

ಸೈಬರ್ ಜಗತ್ತಿನಲ್ಲಿ ಆಸೆ ಆಮಿಷಗಳಿಗೆ ಬಲಿಯಾಗದೆ, ಪೊಲೀಸ್ ಇಲಾಖೆಯ ಜಾಗೃತಿ ಸಂದೇಶಗಳನ್ನು ಪಾಲಿಸಿಕೊಂಡು, ವಿವೇಚನ ಬಳಸಿ ಆರ್ಥಿಕ ವ್ಯವಹಾರ ನಡೆಸಿದರೆ ಮಾತ್ರ ಸೈಬರ್ ವಂಚನೆಯಿಂದ ರಕ್ಷಿಸಿಕೊಳ್ಳಲು ಸಾಧ್ಯ. ಸದ್ಯಕ್ಕೆ ಉಳಿದಿರುವುದು ಇದೊಂದೇ ಮಾರ್ಗ.

## ನೂತನ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರರಿಗೆ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್‌ನಿಂದ ಸ್ವಾಗತ

# ನಗರಸಭೆಗೆ ಸೂಕ್ತ ನಿರ್ದೇಶನ ನೀಡಲು ಮನವಿ

**■ವಿಜಯಸಾಕ್ಷಿ ಸುದ್ದಿ, ಗದಗ**

ನೂತನವಾಗಿ ಗದಗ ಜಿಲ್ಲೆಯ ಜಿಲ್ಲಾಧಿಕಾರಿಗಳಾಗಿ ಅಧಿಕಾರ ವಹಿಸಿಕೊಂಡ ಸಿ.ಎನ್. ಶ್ರೀಧರ್ ಅವರನ್ನು ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್‌ನ ಅಧ್ಯಕ್ಷ ತಾತನಗೌಡ ಎಸ್.ಪಾಟೀಲ ಇವರ ನಿಯೋಗದೊಂದಿಗೆ ಪುಷ್ಪಗುಚ್ಛ ನೀಡಿ ಸ್ವಾಗತಿಸುವ ಮೂಲಕ ಎಂ.ಎಸ್.ಎಂ.ಇ. ವ್ಯಾಪ್ತಿಗೆ ಒಳಪಡುವ ಸಣ್ಣ, ಅತಿ ಸಣ್ಣ ಹಾಗೂ ಮಧ್ಯಮ ಕೈಗಾರಿಕೆಗಳು ನಗರ ಸಭೆಯಿಂದ ಡಿ.ಓ.ಟಿ. ಲೈಸನ್ಸ್‌ನಲ್ಲಿ ರಿಯಾಯತಿ ಇರುವ ಕುರಿತು ಜಿಲ್ಲಾಧಿಕಾರಿಗಳ ಗಮನಕ್ಕೆ ತರಲಾಯಿತು.



ಉದ್ದಿಮೆ ಪರವಾನಿಗೆಗೆ ವಿನಾಯಿತಿ ಕೋರುವ ಪ್ರಕರಣಗಳಲ್ಲಿ ಸಂಬಂಧಪಟ್ಟ ಇಲಾಖೆಯಲ್ಲಿ ನೋಂದಣಿ ಮಾಡಿಕೊಂಡಿರುವ ಬಗ್ಗೆ ನಿಯಮಾನುಸಾರ ಪರಿಶೀಲಿಸಿ ಉದ್ದಿಮೆ ಪರವಾನಿಗೆಯಲ್ಲಿ ವಿನಾಯಿತಿ ಇದ್ದರೂ ಕೂಡಾ ಗದಗ-ಬೆಟಗೇರಿ ನಗರ ಸಭೆಯಿಂದ ಸ್ಥಳೀಯ ಉದ್ದಿಮೆ ಪರವಾನಿಗೆ ಪಡೆದುಕೊಳ್ಳಬೇಕೆಂದು ತಿಳಿಸುತ್ತಿದ್ದಾರೆ. ಈಗಾಗಲೇ ನಗರಸಭೆಗೆ ಪತ್ರದ ಮುಖಾಂತರ ಹಲವಾರು ಬಾರಿ ಕರ್ನಾಟಕ ರಾಜ್ಯಪತ್ರದ ಪ್ರತಿ ಮತ್ತು ಪೌರಾಡಳಿತ ನಿರ್ದೇಶನಾಲಯದವರ ಸುತ್ತೋಲೆ ಪ್ರತಿಯನ್ನು ಕೂಡಾ ನೀಡಿದ್ದರೂ ಅದನ್ನು ಲೆಕ್ಕಿಸದೇ ಪುನಃ ಎಂ.ಎಸ್.ಎಂ.ಇ. ಪರವಾನಿಗೆ ಪಡೆದವರಿಗೆ ತೊಂದರೆಯಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳಾದ ಸಿ.ಎನ್. ಶ್ರೀಧರ ಅವರಿಗೆ ಸಂಸ್ಥೆಯ ಅಧ್ಯಕ್ಷ ತಾತನಗೌಡ ಎಸ್.ಪಾಟೀಲ ಮಾಹಿತಿ ನೀಡಿ, ನಗರಸಭೆಗೆ ಸೂಕ್ತ ನಿರ್ದೇಶನ ಮಾಡಬೇಕೆಂದು ವಿನಂತಿಸಿದರು.

ನಿಯೋಗದಲ್ಲಿ ಸಂಸ್ಥೆಯ ಉಪಾಧ್ಯಕ್ಷ ಶಿವಯ್ಯ ಆರ್.ನಾಲತ್ವಾಡಮಠ, ಸಹ ಗೌರವ ಕಾರ್ಯದರ್ಶಿ ರಾಘವೇಂದ್ರ ಎಸ್.ಕಾಲವಾಡ, ಸೋಮನಾಥ ಕೆ.ಜಾಲಿ, ಕೋಶಾಧ್ಯಕ್ಷ ಸಂಜಯ ಸಿ.ಬಾಗಮಾರ ಉಪಸ್ಥಿತರಿದ್ದರೆಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ರಾಜ್ಯ ಪತ್ರದ ಅಧಿಸೂಚನೆಯಲ್ಲಿ ಸೂಚಿಸಿರುವಂತೆ ಭಾರತ ಸರ್ಕಾರದ ಕೈಗಾರಿಕಾ ಇಲಾಖೆಯಲ್ಲಿ ನೋಂದಣಿಯಾಗಿರುವ ಉದ್ಯಮಗಳಿಗೆ ನಗರ ಸ್ಥಳೀಯ ಸಂಸ್ಥೆಗಳಿಂದ ಉದ್ದಿಮೆ ಪರವಾನಿಗೆ (ಡಿ.ಓ.ಟಿ) ಲೈಸನ್ಸನಲ್ಲಿ ವಿನಾಯತಿ ನೀಡುವ ಕುರಿತು ನಿರ್ದೇಶಕರು ಪೌರಾಡಳಿತ ನಿರ್ದೇಶನಾಲಯ ಸುತ್ತೋಲೆ ಹೊರಡಿಸಿದ್ದು, ಅತೀ ಸಣ್ಣ ಸಣ್ಣ ಮತ್ತು ಮಧ್ಯಮ ಎಂಟರಪ್ರೈಸಿಸ್ ಉದ್ಯಮಗಳು ಜಿಲ್ಲಾ ಕೈಗಾರಿಕಾ ಇಲಾಖೆಯಲ್ಲಿ ನೋಂದಣಿ ಮಾಡಿಕೊಂಡಿರುವ ಉದ್ಯಮಗಳಿಗೆ ನಗರ ಸ್ಥಳೀಯ ಸಂಸ್ಥೆಯಿಂದ ಉದ್ದಿಮೆ ಪರವಾನಿಗೆಯಿಂದ ವಿನಾಯತಿ ನೀಡುವ ಬಗ್ಗೆ 18/12/2017ರಂದು ನಿರ್ದೇಶಕರು ಪೌರಾಡಳಿತ ನಿರ್ದೇಶನಾಲಯ ಬೆಂಗಳೂರು ಇವರು ಸುತ್ತೋಲೆಯಲ್ಲಿ ಆದೇಶಿಸಲಾಗಿದೆ.

## ಜಿಲ್ಲಾ ಕಸಾಪ ಅಧ್ಯಕ್ಷರ ನಡೆಗೆ ನರೇಗಲ್ಲ ಕಸಾಪ ಖಂಡನೆ

# ಏಕಮುಖ ನಡೆ ಸೂಕ್ತವಲ್ಲ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಗಜೇಂದ್ರಗಡದಲ್ಲಿ ಜ. 20 ಮತ್ತು 21ರಂದು ನಡೆಯಲಿರುವ ಗದಗ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸಂದರ್ಭದಲ್ಲಿ ತಾಲೂಕು ಮತ್ತು ಗದಗ ಜಿಲ್ಲಾ ಕಸಾಪ ಅಧ್ಯಕ್ಷರುಗಳ ಏಕಮುಖ ನಡೆಯನ್ನು, ನಿರ್ಲಕ್ಷ್ಯ ಧೋರಣೆಯನ್ನು ನರೇಗಲ್ಲ ಹೋಬಳಿ ಕಸಾಪ ಘಟಕವು ಖಂಡಿಸಿದೆ.



ನರೇಗಲ್ಲ ಹೋಬಳಿ ಘಟಕದ ಅಧ್ಯಕ್ಷ ಎಂ.ವಿ. ವೀರಾಪುರ ಅವರ ನಿವಾಸದಲ್ಲಿ ನರೇಗಲ್ಲ ಹೋಬಳಿ ಕಸಾಪ ಆಜೀವ ಸದಸ್ಯರು ಬುಧವಾರ ಸಂಜೆ ಸಭೆ ಸೇರಿದ್ದ ಸಭೆಯಲ್ಲಿ ಹಿರಿಯ ಸಾಹಿತಿ ಎಂ.ಎಸ್. ದಡೇಸೂರಮಠ ಮಾತನಾಡಿ, ಈಚೆಗೆ ಬಿಡುಗಡೆ ಮಾಡಲಾದ ಜಿಲ್ಲಾ ಕಸಾಪದ ಮಾಹಿತಿಯ ಪ್ರಕಾರ ಜ. 19ರಂದು ತಾಯಿ ಭುವನೇಶ್ವರಿ ಮೆರವಣಿಗೆಯನ್ನು ಕರ್ನಾಟಕ ಏಕೀಕರಣದ ರೂವಾರಿ ಜಕ್ಕಲಿಯ ಅಂದಾನಪ್ಪ ದೊಡ್ಡಮೇಟಿಯವರ ಮನೆಯಿಂದ ಪ್ರಾರಂಭಿಸಿ, ನರೇಗಲ್ಲ ಮಾರ್ಗವಾಗಿ ಗಜೇಂದ್ರಗಡ ಪಟ್ಟಣದವರೆಗೆ ನಡೆಸಲಾಗುವುದೆಂದು ತಿಳಿಸಿದೆ. ಆದರೆ ಈ ಕುರಿತು ಜಿಲ್ಲಾಧ್ಯಕ್ಷರಾಗಲಿ, ತಾಲೂಕಾ ಅಧ್ಯಕ್ಷರಾಗಲಿ, ನರೇಗಲ್ಲ ಹೋಬಳಿ ಘಟಕದ ಅಧ್ಯಕ್ಷರನ್ನಾಗಲಿ ಅಥವಾ ಯಾವುದೇ ಸದಸ್ಯರನ್ನಾಗಲಿ ವಿಶ್ವಾಸಕ್ಕೆ ತೆಗೆದುಕೊಳ್ಳದೆ ತಮ್ಮ ಮನಸ್ಸಿಗೆ ಬಂದಂತೆ ನಡೆದುಕೊಂಡಿರುವುದನ್ನು ಸಭೆಯು ಬಲವಾಗಿ ಖಂಡಿಸುತ್ತದೆ ಎಂದರು.

ಬೀಚಿ ಬಳಗದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ ಮಾತನಾಡಿ, ನರೇಗಲ್ಲದಲ್ಲಿ ಅನೇಕ ಸಾಹಿತ್ತಿಕ ಸಂಘಟನೆಗಳಿವೆ. ಈ ಸಂಘಟನೆಗಳಲ್ಲಿರುವ ಬಹುತೇಕರು ಕಸಾಪದ ಸದಸ್ಯರುಗಳೇ ಆಗಿದ್ದಾರೆ. ಹೀಗಿರುವಾಗ ಯಾರನ್ನೂ ವಿಶ್ವಾಸಕ್ಕೆ ತೆಗೆದುಕೊಳ್ಳದೆ ಇಬ್ಬರೂ ಅಧ್ಯಕ್ಷರು ನಡೆದುಕೊಳ್ಳುತ್ತಿರುವ ರೀತಿ ಎಲ್ಲರ ಮನಸ್ಸಿಗೆ ನೋವನ್ನುಂಟು ಮಾಡಿದೆ ಎಂದರು.

ಸರಕಾರಿ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಡಿ.ಎ. ಅರವಟಗಿಮಠ ಮಾತನಾಡಿ, ಜಿಲ್ಲಾ ಅಧ್ಯಕ್ಷರು ಎಂದಿನಿಂದಲೂ ನರೇಗಲ್ಲ ಹೋಬಳಿ ಘಟಕವನ್ನು ನಿರ್ಲಕ್ಷಿಸುತ್ತ ಬಂದಿದ್ದಾರೆ. ಜಿಲ್ಲಾ ಸಮ್ಮೇಳನದ ಸಂದರ್ಭದಲ್ಲಿ ಇಬ್ಬರೂ ಅಧ್ಯಕ್ಷರು ಯಾರನ್ನೂ ವಿಶ್ವಾಸಕ್ಕೆ ತೆಗೆದುಕೊಳ್ಳದೆ ಸಮ್ಮೇಳನ ಮಾಡುತ್ತಾರೆ ಎಂಬುದು ನಮಗೆ ತಿಳಿದಿರಲಿಲ್ಲ ಎಂದರು.

ಸಭೆಯಲ್ಲಿ ಡಾ. ಆರ್.ಕೆ. ಗಚ್ಚಿನಮಠ, ತಾಲೂಕಾ ಕಸಾಪ ಕಾರ್ಯದರ್ಶಿ ಬಿ.ಬಿ. ಕುರಿ, ಎಂ.ಕೆ. ಬೇವಿನಕಟ್ಟಿ, ವಿ.ವಿ. ಅಣ್ಣಿಗೇರಿ ಅರುಣ ಬಿ.ಕುಲಕರ್ಣಿ, ಬಿ.ಟಿ. ತಾಳಿ, ಸೇರಿದಂತೆ ಇನ್ನೂ ಅನೇಕರಿದ್ದರು.

ಹೋಬಳಿ ಘಟಕದ ಅಧ್ಯಕ್ಷ ಎಂ.ವಿ. ವೀರಾಪೂರ ಮಾತನಾಡಿ, ಜಿಲ್ಲಾಧ್ಯಕ್ಷರ ಚುನಾವಣೆಯಿಂದಲೂ ಅವರ ಎಲ್ಲ ಕಾರ್ಯಗಳನ್ನೂ ನರೇಗಲ್ಲ ಕಸಾಪ ಬೆಂಬಲಿಸುತ್ತ ಬಂದಿದೆ. ಜಿಲ್ಲಾ ಸಮ್ಮೇಳನದಂತಹ ಸಂದರ್ಭದಲ್ಲಿ ಇಬ್ಬರೂ ಅಧ್ಯಕ್ಷರುಗಳು ನರೇಗಲ್ಲ ಘಟಕವನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದೆ ಕಾರ್ಯ ನಿರ್ವಹಿಸುತ್ತಿರುವುದು ವಿಷಾದನೀಯ. ಆದ್ದರಿಂದ ಅನಿವಾರ್ಯವಾಗಿ ನಾವು ಖಂಡಿಸಬೇಕಿದೆ. ಇನ್ನಾದರೂ ಅವರು ತಮ್ಮ ಧೋರಣೆಯನ್ನು ಸರಿಪಡಿಸಿಕೊಳ್ಳಬೇಕೆಂದರು.

# ಕೆಸೆಟ್‌ನಲ್ಲಿ ಅರ್ಹತೆ ಪಡೆದವರಿಗೆ ಅವಕಾಶ ನೀಡಿ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಕಾಲೇಜು ಶಿಕ್ಷಣ ಇಲಾಖೆ ವತಿಯಿಂದ ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳಲ್ಲಿ ಕರೆಲಾಗಿರುವ ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಜನವರಿ 4ರಂದು ಕೆಇಎ ವತಿಯಿಂದ ಪ್ರಕಟಗೊಂಡ ಕರ್ನಾಟಕ ರಾಜ್ಯ ಅರ್ಹತಾ ಪರೀಕ್ಷೆ (ಕೆ-ಸೆಟ್) ಫಲಿತಾಂಶದಲ್ಲಿ ಅರ್ಹತೆ ಪಡೆದ ಅತಿಥಿ ಉಪನ್ಯಸಕರಿಗೆ ಅವಕಾಶ ನೀಡಬೇಕು ಎಂದು ಅತಿಥಿ ಉಪನ್ಯಾಸಕ ಶ್ರೀಕಾಂತ ನಾಯ್ಕ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಈಗಾಗಲೇ ಕೆ-ಸೆಟ್ ಫಲಿತಾಂಶ ಪ್ರಕಟವಾಗಿದೆ. ಕೆಇಎಯಿಂದ ಅರ್ಹತಾ ಪ್ರಮಾಣಪತ್ರ ನೀಡಲು ಸಮಯ ಬೇಕಾಗುತ್ತದೆ. ಆದರೆ ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಜನವರಿ 8 ಕೊನೆಯ ದಿನಾಂಕವಾಗಿದೆ. ಆದಕಾರಣ ಉನ್ನತ ಶಿಕ್ಷಣ ಸಚಿವರು, ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರು ಈಚೆಗೆ ಪ್ರಕಟವಾದ ಫಲಿತಾಂಶದಲ್ಲಿ ಅರ್ಹತೆ ಪಡೆದವರುಗೂ ಅವಕಾಶ ಮಾಡಿಕೊಡಬೇಕು ಎಂದರು.

ಗದಗ ನಗರದ ಅತಿಥಿ ಉಪನ್ಯಾಸಕಿ ತಾಜಿನಾಬಾನು ಹುಲ್ಲೂರು ಮಾತನಾಡಿ, ಕೆ-ಸೆಟ್ ಫಲಿತಾಂಶದ ಅರ್ಹತಾಪಟ್ಟಿಯಲ್ಲಿ ಹೆಸರಿದ್ದರೂ ಸಹ ಅದನ್ನು ಅರ್ಜಿಯಲ್ಲಿ ಕಾಣಿಸಲು ಅವಕಾಶ ಇಲ್ಲದಂತಾಗಿದೆ. ಅನೇಕ ವರ್ಷಗಳಿಂದ ಕಡಿಮೆ ವೇತನದಲ್ಲಿ ಅತಿಥಿ ಉಪನ್ಯಾಸಕರಾಗಿ ಸರ್ಕಾರಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸಿದ್ದೇವೆ.

ಆದರೆ ಕೆ-ಸೆಟ್ ಅರ್ಹತೆ ಕಾಣಿಸಲು ಇಲಾಖೆಯಿಂದ ಅವಕಾಶ ನೀಡದ ಹೋದರೆ ಅರ್ಹರಾಗಿಯೂ ಅವಕಾಶ ವಂಚಿತರಾಗುತ್ತೇವೆ. ಆದ್ದರಿಂದ ಅರ್ಹತೆಯನ್ನು ಪರಿಗಣನೆಗೆ ತೆಗೆದುಕೊಂಡು ಕಾಲೇಜು ಶಿಕ್ಷಣ ಇಲಾಖೆಯಿಂದ ಸುತ್ತೋಲೆ ಹೊರಡಿಸಬೇಕು ಎಂದರು.

ಅತಿಥಿ ಉಪನ್ಯಾಸಕ ಚಂದ್ರು ಎಂ.ರಾಥೋಡ್ ಮಾತನಾಡಿ, ಕೆ-ಸೆಟ್ ನಲ್ಲಿ ಅರ್ಹತೆ ಪಡೆದವರಿಗೆ ಅರ್ಹತಾ ಪ್ರಮಾಣಪತ್ರದ ಕಾರಣದಿಂದ ಅವಕಾಶ ನೀಡದೆ ಇದ್ದರೆ ಅನೇಕ ಅತಿಥಿ ಉಪನ್ಯಾಸಕರ ಬದುಕಿಗೆ ತೊಂದರೆ ಆಗಲಿದೆ.

ಆದ್ದರಿಂದ ಈ ಬಾರಿ ಅರ್ಹತೆ ಪಡೆದವರಿಗೆ ಅವಕಾಶ ನೀಡಬೇಕು ಎಂದರು.

## ವಿಕಲಚೇತನ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

2024-25ನೇ ಸಾಲಿನ ಶೇ.5% ಯೋಜನೆಯ ಅಂಗವಿಕಲ ವಿಕಲಚೇತನ ಫಲಾನುಭವಿಗಳಿಗೆ ಎಸ್.ಎಫ್.ಸಿ ಮತ್ತು ನಗರಸಭೆ ನಿಧಿ ಅನುದಾನದಡಿ ಲ್ಯಾಪ್‌ಟ್ಯಾಪ್ ಖರೀದಿಸಲು ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಜನವರಿ 27 ಆಗಿದ್ದು, ಫಲಾನುಭವಿಗಳು ಅರ್ಜಿಯನ್ನು ಗದಗ-ಬೆಟಗೇರಿ ನಗರಸಭೆ ಕಾರ್ಯಾಲಯಕ್ಕೆ ಸಲ್ಲಿಸಬೇಕು. ಈಗಾಗಲೇ ಸೌಲಭ್ಯ ಪಡೆದಂತಹ ಫಲಾನುಭವಿಗಳು ಅರ್ಹರಿರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಗದಗ-ಬೆಟಗೇರಿ ನಗರಸಭೆ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

## ಕಿರುಕುಳ ಕೊಡಬೇಡಿ ಎಂದು ಎಬಿವಿಪಿ ಕಾರ್ಯಕರ್ತರಿಗೆ ಮನವಿ

**■ವಿಜಯಸಾಕ್ಷಿ ಸುದ್ದಿ, ಶಾಜಾಪುರ**

ಮಧ್ಯಪ್ರದೇಶದ ಮಾಲ್ವಾ ಪ್ರದೇಶದ ಶಾಜಾಪುರ ಪಟ್ಟಣದ ಪಾಲಿಟೆಕ್ನಿಕ್ ಕಾಲೇಜಿನ ಮಹಿಳಾ ಉಪನ್ಯಾಸಕಿಯೊಬ್ಬರು ಪರೀಕ್ಷೆಯಲ್ಲಿ ಕಟ್ಟುನಿಟ್ಟಾಗಿದ್ದ ಕಾರಣ ಎಬಿವಿಪಿಯವರು ತನ್ನನ್ನು ಗುರಿಮಾಡಿದ್ದರಿಂದ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ (ಎಬಿವಿಪಿ) ಕಾರ್ಯಕರ್ತರಿಗೆ ಕಿರುಕುಳ ನೀಡಬೇಡಿ ಎಂದು ಬೇಡಿಕೊಂಡಿದ್ದಾರೆ.

# ರಾಷ್ಟ್ರಕವಿ ಕುವೆಂಪು ಜನ್ಮದಿನ ಆಚರಣೆ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಬುಧವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಂಗಣದಲ್ಲಿ ರಾಷ್ಟ್ರಕವಿ ಕುವೆಂಪು ಅವರ ಜನ್ಮ ದಿನಾಚರಣೆಯನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ರಾಷ್ಟ್ರಕವಿ ಕುವೆಂಪು ಅವರ ಭಾವಚಿತ್ರಕ್ಕೆ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಪುಷ್ಪಾರ್ಚನೆ ಸಲ್ಲಿಸಿದರು.




ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ಲಿಂಗರಾಜ ಅಂಗಡಿ, ಹಿರಿಯ ಸಾಹಿತಿ ಬಾಳಣ್ಣ ಶೀಗಿಹಳ್ಳಿ, ಜನಜಾಗೃತಿ ಸಮಿತಿ ಅಧ್ಯಕ್ಷ ವಸಂತ ಅರ್ಕಾಚಾರ, ವೀರಣ್ಣ ಪತ್ತಾರ ಸೇರಿದಂತೆ ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಸ್ವಾಗತಿಸಿದರು, ಆರತಿ ದೇವಶಿಕಾಮಣಿ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

# ಬೇರೆ ಭಾಷೆಯ ನಾಟಕಗಳಿಗೂ ಆದ್ಯತೆ ನೀಡಿ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಕನ್ನಡ ಭಾಷೆ ಮಾತ್ರವಲ್ಲದೆ ಹಿಂದಿ ಭಾಷೆಯ ನಾಟಕವನ್ನು ರಂಗಾಯಣವು ಸಿದ್ಧಪಡಿಸುತ್ತಿರುವುದು ಹೆಮ್ಮೆಯ ಸಂಗತಿ. ಇದೇ ರೀತಿ ಇನ್ನೂ ಬೇರೆ ಭಾಷೆಯ ನಾಟಕಗಳನ್ನು ಸಿದ್ಧಪಡಿಸಿ ಪ್ರದರ್ಶನ ಮಾಡಬೇಕು ಎಂದು ರಂಗ ನಿರ್ದೇಶಕರಾದ ನರೇಂದ್ರ ಸಾಚರ ಹೇಳಿದರು.



ರಂಗಾಯಣವು ಪಂ.ಬಸವರಾಜ ರಾಜಗುರು ಬಯಲು ರಂಗಮಂದಿರದಲ್ಲಿ ರಂಗ ತಂಡಗಳ ಸಹಯೋಗದಲ್ಲಿ ನಾಟಕ ತರಬೇತಿ ಕಾರ್ಯಾಗಾರದಲ್ಲಿ ಸಿದ್ಧಗೊಂಡ ಹಾಗೂ ಸ್ಥಳೀಯ ತಂಡಗಳಿಂದ ಹಮ್ಮಿಕೊಂಡಿದ್ದ ರಂಗಾಯಣ ನಾಟಕೋತ್ಸವದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಧಾರವಾಡವು ವಿದ್ಯಾಕಾಶಿ ಎಂದೇ ಪ್ರಸಿದ್ಧವಾಗಿದೆ. ಆದ್ದರಿಂದ ರಂಗಾಯಣವು ಬೇರೆ ಭಾಷೆಯ ನಾಟಕಗಳಿಗೂ ಆದ್ಯತೆಯನ್ನು ನೀಡುವ ಮೂಲಕ ನೋಡುಗರಿಗೆ ವಿಭಿನ್ನ ಭಾಷೆ, ಸಂಸ್ಕೃತಿ, ಆಚಾರ-ವಿಚಾರ ಸೇರಿದಂತೆ ಹಲವಾರು ಮಾಹಿತಿಗಳ ಜೊತೆಗೆ ಮನರಂಜನೆಯನ್ನು ನೀಡಿದಂತಾಗುತ್ತದೆ ಎಂದು ಸಲಹೆ ನೀಡಿದರು.

ರಂಗಾಯಣ ನಿರ್ದೇಶಕರಾದ ಡಾ. ರಾಜು ತಾಳಿಕೋಟಿ ಅಧ್ಯಕ್ಷತೆ ವಹಿಸಿ ಮಾತನಾಡಿ, ರಂಗಾಯಣವು ಆಯೋಜಿಸಿದ ನಾಲ್ಕು ದಿನದ ರಂಗಾಯಣ ನಾಟಕೋತ್ಸವದ ಯಶಸ್ಸಿಗೆ ಎಲ್ಲ ರಂಗಾಸಕ್ತರು, ಸಾಹಿತಿಗಳು ಉತ್ತಮ ಸಹಕಾರವನ್ನು ನೀಡಿದ್ದಾರೆ. ಇದೇ ರೀತಿ ಕಲೆಗೆ ಪ್ರೋತ್ಸಾಹ ನೀಡುವುದರಿಂದ ರಂಗಾಯಣವು ಇನ್ನೂ ಹಲವಾರು ನಾಟಕೋತ್ಸವಗಳನ್ನು ಆಯೋಜಿಸಲು ಪ್ರೇರಣೆ ನೀಡಬೇಕು ಎಂದು ಹೇಳಿದರು.

ರಂಗ ನಿರ್ದೇಶಕಿ ಮಾಯಾ ರಾವ್, ನಾಟಕ ನಿರ್ದೇಶಕರಾದ ಪಾಂಡುರಂಗ ಮಸಾಲೆ, ರಂಗಾಯಣ ಆಡಳಿತಾಧಿಕಾರಿಗಳಾದ ಶಶಿಕಲಾ ಹುಡೇದ ಸೇರಿದಂತೆ ಇತರರು ಇದ್ದರು. ನಂತರ 'ಜೋಕುಮಾರ ಸ್ವಾಮಿ' ನಾಟಕವನ್ನು ಶೂಲೇಬಾವಿ ಮನುಜಮತ ಫೌಂಡೇಶನ್ ತಂಡದವರು ಪ್ರಸ್ತುತಪಡಿಸಿದರು.

# ಗ್ಯಾರಂಟಿ ಯೋಜನೆಗಳ ಜಿಲ್ಲಾ ಪ್ರಾಧಿಕಾರದ ಸಭೆ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಗ್ಯಾರಂಟಿ ಯೋಜನೆಗಳಿಂದ ಬಡ ಜನರಿಗೆ ಅನುಕೂಲವಾಗಿದೆ. ಈ ಯೋಜನೆಯಿಂದ ಗ್ರಾಮೀಣ ಪ್ರದೇಶದ ಮಹಿಳೆಯರು ಸ್ವಾವಲಂಬಿಗಳಾಗಿ ಸ್ವಂತ ಉದ್ಯೋಗ, ಟೇಲರಿಂಗ್ ಇತರೆ ಉದ್ಯೋಗ ಮಾಡುತ್ತಿದ್ದಾರೆ ಎಂದು ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಎಸ್. ಆರ್. ಪಾಟೀಲ ಹೇಳಿದರು.




ಅವರು ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಸರ್ಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕಾರ್ಯ ವಿಧಾನಗಳು ಹಾಗೂ ಪರಿಣಾಮಕಾರಿಯಾಗಿ ಜಾರಿಗೊಳಿಸುವ ಬಗ್ಗೆ ನಡೆದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಗ್ಯಾರಂಟಿ ಯೋಜನೆಯ ಬಗ್ಗೆ ನಗರ ಹಾಗೂ ಗ್ರಾಮಗಳಲ್ಲಿ ಹೆಚ್ಚಿನ ಪ್ರಚಾರ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಹಾಗೂ ಯುವ ನಿಧಿ ನೋಂದಣಿ ಪ್ರಕ್ರಿಯೆ ಪ್ರಾರಂಭವಾಗಿದೆ. ಹೆಚ್ಚು ಪ್ರಚಾರ ಮಾಡುವ ಕುರಿತು ಕರಪತ್ರಗಳ ಬಿಡುಗಡೆ ಮಾಡಿ ಚಾಲನೆ ನೀಡಿದರು.

ಉಪ ಕಾರ್ಯದರ್ಶಿ ಬಿ.ಎಸ್. ಮೂಗನೂರಮಠ ಮಾತನಾಡಿ, ನಗರ ಹಾಗೂ ಗ್ರಾಮೀಣ ಮಟ್ಟದಲ್ಲಿ ಪದವಿ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ಯುವನಿಧಿ ಯೋಜನೆಯ ಬಗ್ಗೆ ಹೆಚ್ಚಿನ ಪ್ರಚಾರ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಪ್ರಾಧಿಕಾರದ ಉಪಾಧ್ಯಕ್ಷ ಅರವಿಂದ ಏಗನಗೌಡರ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರುಗಳಾದ ಮುರಗಯ್ಯಾ ವಿರಕ್ತಮಠ, ಅಬ್ದುಲ್ ರಶೀದ ಬೋಳಾಬಾಯಿ, ರತ್ನಾ ತೇಗೂರಮಠ ಮಾತನಾಡಿದರು. ಸಭೆಯಲ್ಲಿ ಜಿಲ್ಲಾಮಟ್ಟದ ಅಧಿಕಾರಿಗಳು ಹಾಗೂ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಸದಸ್ಯರು ಉಪಸ್ಥಿತರಿದ್ದರು.

# ಶ್ರೀ ಕಲ್ಮೇಶ್ವರ ಬೆರಳಚ್ಚು ಸಂಸ್ಥೆಯ ಸ್ನೇಹ ಸಮ್ಮೇಳನ

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಶ್ರೀ ಕಲ್ಮೇಶ್ವರ ಬೆರಳಚ್ಚು ಮತ್ತು ಕಂಪ್ಯೂಟರ್ ವಿದ್ಯಾಲಯದ ವಾರ್ಷಿಕ ಸ್ನೇಹ ಸಮ್ಮೇಳನವನ್ನು ಜ. 11ರಂದು ಬೆಳಿಗ್ಗೆ 9 ಗಂಟೆಗೆ ವಿದ್ಯಾಲಯದ ಕಾರ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ.

ಲೇಖಕರು ಮತ್ತು ವಿಶ್ರಾಂತ ಉಪನ್ಯಾಸಕರಾದ ಡಾ. ಶರಣಬಸವ ವೆಂಕಟಾಪೂರ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ವಿದ್ಯಾಲಯದ ಪ್ರಾಚಾರ್ಯ ಡಾ. ತಯಬಅಲಿ ಅ.ಹೊಂಬಳ ಅಧ್ಯಕ್ಷತೆ ವಹಿಸುವರು. ಕಾರ್ಯಕ್ರಮದಲ್ಲಿ ಪ್ರಥಮದರ್ಜೆಯ ವಿದ್ಯಾರ್ಥಿಗಳು ಪ್ರೌಢದರ್ಜೆಯ ವಿದ್ಯಾರ್ಥಿಗಳಿಗೆ ಬಿಳ್ಕೊಡುವರು. ವಿಶ್ವ ಬೆರಳಚ್ಚು ದಿನಾಚರಣೆ, ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯುವವು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಚೆನ್ನಾದಾಸರ ಸಮಾಜದ ಸಭೆ ಜ.12ಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಅಖಿಲ ಕರ್ನಾಟಕ ಚೆನ್ನಾದಾಸರ ಮಹಾಸಭಾದ ಜಿಲ್ಲಾ ಅಧ್ಯಕ್ಷ ಲಕ್ಷ್ಮಣ ಆಯಿ ಶೇಷಗಿರಿ ಇವರ ಸೂಚನೆ ಮೇರೆಗೆ ಜ.12ರಂದು ಸಭೆ ಕರೆಯಲಾಗಿದೆ.ಸಭೆಯಲ್ಲಿ ನಿವೃತ್ತ ನ್ಯಾಯಮೂರ್ತಿ ನಾಗಮೋಹನ ದಾಸ್ ವರದಿಯ ಕುರಿತು, ಏಪ್ರಿಲ್‌ನಲ್ಲಿ ವಧು-ವರರ ಸಮಾವೇಶ ಏರ್ಪಡಿಸುವ ಕುರಿತು, ದಾಸರ ಸಮಾನ ಪದಗಳನ್ನು ಹಿಂದುಳಿದ ವರ್ಗಗಳ ಪಟ್ಟಿಯಿಂದ ಕೈ ಬಿಡುವ ಕುರಿತು ಮತ್ತು ಕೇಂದ್ರ ಸರ್ಕಾರದ ಸಮಾಜ ಕಲ್ಯಾಣ ಇಲಾಖೆ ಸಚಿವರಿಗೆ ಮನವಿ ಕೊಡುವ ಕುರಿತು ಸಭೆಯಲ್ಲಿ ಚರ್ಚಿಸಲಾಗುವುದು. ಗದಗ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಚೆನ್ನಾದಾಸರ ಸಮಾಜದ ಹಿರಿಯರು ಮುಖಂಡರು, ಯುವಕರು, ಮಹಿಳೆಯರು ಭಾಗವಹಿಸುವಂತೆ ಪ್ರಕಟಣೆ ತಿಳಿಸಿದೆ.

**ಪತ್ರಿಕಾಗೋಷ್ಠಿಯಲ್ಲಿ ಚಿಕ್ಕಟ್ಟಿ ಶಿಕ್ಷಣ ಸಂಸ್ಥೆಯ ಎಸ್.ವಾಯ್. ಚಿಕ್ಕಟ್ಟಿ ಅಭಿಪ್ರಾಯ**

# ಜಿಲ್ಲೆಯ ಫಲಿತಾಂಶ ಸುಧಾರಣೆಗೆ ಒತ್ತು

**■ವಿಜಯಸಾಕ್ಷಿ ಸುದ್ದಿ, ಗದಗ**

ಕಳೆದ 10-15ವರ್ಷಗಳಿಂದ ಜಿಲ್ಲೆಯಲ್ಲಿ ಪಿಯುಸಿ ಫಲಿತಾಂಶ ಕಡಿಮೆ ಆಗಲು ಉತ್ತಮ ವಿದ್ಯಾರ್ಥಿಗಳು ಬೇರೆ ಜಿಲ್ಲೆಗೆ ವಲಸೆ ಹೋಗುವುದು ಪ್ರಮುಖ ಕಾರಣವಾಗಿದ್ದು, ಇದನ್ನು ತಡೆಯಬೇಕಾಗಿದೆ. ಬೇರೆ ಜಿಲ್ಲೆಗಿಂತ ಗದಗ ಜಿಲ್ಲೆಯ ಶಿಕ್ಷಣ ಸಂಸ್ಥೆಗಳು ಕಡಿಮೆಯೇನಿಲ್ಲ. ಆದರೆ, ಜಿಲ್ಲೆಯ ಫಲಿತಾಂಶ ಸುಧಾರಣೆಗೆ ಬಳ್ಳಾರಿಯ ಚೈತನ್ಯ ಸಂಸ್ಥೆಯ ಚೇರಮನ್ ರಾಧಾಕೃಷ್ಣ ಅವರ ತತ್ವಾದರ್ಶ ಪಾಲಿಸುವ ಅವಶ್ಯಕತೆ ಇದೆ ಎಂದು ಎಸ್. ವಾಯ್. ಚಿಕ್ಕಟ್ಟಿ ಅಭಿಪ್ರಾಯಪಟ್ಟರು.

ಗುರುವಾರ ನಗರದ ಪತ್ರಿಕಾಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಚೈತನ್ಯ ಶಿಕ್ಷಣ ಸಂಸ್ಥೆಯವರು 18 ಪಿಯು ಕಾಲೇಜುಗಳನ್ನು ನಡೆಸುತ್ತಿದ್ದು, ಇಲ್ಲಿ ಶಿಸ್ತು, ಶಿಕ್ಷಣ, ಆರೋಗ್ಯಕ್ಕೆ ಒತ್ತು ನೀಡಿ ಶಿಕ್ಷಣ ನೀಡುತ್ತಾರೆ. ರಾಧಾಕೃಷ್ಣ ಅವರು ಪ್ರಾಚಾರ್ಯರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದು, ತಮ್ಮ ಅನುಭವವನ್ನು ವಿದ್ಯಾರ್ಥಿಗಳಿಗೆ ನೀಡುತ್ತಿದ್ದಾರೆ. 'ಕಾಲೇಜಿನ ಪ್ರಾಚಾರ್ಯರಿಗೆ ಉತ್ತಮ ವೇತನ, ಉತ್ತಮ ಶಿಕ್ಷಣ' ಎನ್ನುವುದೇ ರಾಧಾಕೃಷ್ಣ ಅವರ ಮೂಲ ಮಂತ್ರವಾಗಿದೆ ಎಂದರು.




ಬಳ್ಳಾರಿ, ಕೊಪ್ಪಳ ಸೇರಿದಂತೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ಅವರು ಶಿಕ್ಷಣ ಕ್ಷೇತ್ರದಲ್ಲಿ ತಮ್ಮ ಸೇವೆ ಸಲ್ಲಿಸುತ್ತಿದ್ದು, ರಾಧಾಕೃಷ್ಣ ಅವರು ಶಿಕ್ಷಕರು ಹಾಗೂ ಸಿಬ್ಬಂದಿಗಳಿಗೆ ಪ್ರತಿ ತಿಂಗಳು 1ನೇ ತಾರೀಕಿಗೆ ವೇತನ ನೀಡುತ್ತಾರೆ. ಇದರಿಂದ ಪ್ರಾಚಾರ್ಯರು ಸಂತೋಷಗೊಂಡು ವಿದ್ಯಾರ್ಥಿಗಳಿಗೆ ಯಾವುದೇ ಕೊರತೆಯಾಗದಂತೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡಲು ಸಾಧ್ಯವಾಗುತ್ತದೆ. ಇದರಿಂದ ಸಹಜವಾಗಿಯೇ ಫಲಿತಾಂಶ ಸುಧಾರಣೆ ಕಂಡುಕೊಳ್ಳುತ್ತದೆ ಎಂದರು.

ಚೈತನ್ಯ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ರಾಧಾಕೃಷ್ಣ ಮಾತನಾಡಿ, 2005ರಲ್ಲಿ 300 ವಿದ್ಯಾರ್ಥಿಗಳಿಂದ ಆರಂಭವಾದ ಸಂಸ್ಥೆ ಇಂದು 7000 ಪಿಯುಸಿ ವಿದ್ಯಾರ್ಥಿಗಳಿಗೆ ಪ್ರವೇಶ ನೀಡುತ್ತಿದೆ. ಒಟ್ಟು 18 ಬ್ರ್ಯಾಂಚ್‌ಗಳನ್ನು ನಮ್ಮ ಸಂಸ್ಥೆ ಹೊಂದಿದ್ದು, ಕಾಲೇಜಿನಲ್ಲಿ ಯಾರೇ ಬಂದರೂ ಪ್ರವೇಶ ನೀಡುತ್ತೇವೆ. ಶೇ. 35 ಫಲಿತಾಂಶ ಪಡೆದವರಿಗೂ ಪ್ರವೇಶ ನೀಡಿ ಅವರಿಗೆ ಉತ್ತಮ ಶಿಕ್ಷಣ ನೀಡಿ ಪ್ರತಿ ವರ್ಷ ಶೇ.98ರಷ್ಟು ಫಲಿತಾಂಶ ಕಾಣುತ್ತಿದ್ದೇವೆ ಎಂದರು.

ಪ್ರತಿ ವರ್ಷ ಸಂಸ್ಥೆಯಿಂದ ಕಲಿತು ಹೊರ ಹೋಗುವ ಸುಮಾರು 100 ವಿದ್ಯಾರ್ಥಿಗಳಿಗೆ ಮೆಡಿಕಲ್, 10-15 ಎನ್‌ಐಟಿ ಹಾಗೂ ನೂರಾರು ವಿದ್ಯಾರ್ಥಿಗಳಿಗೆ ಇಂಜಿನಿಯರಿಂಗ್ ಪ್ರವೇಶ ಸಿಗುತ್ತಿದೆ. ಪ್ರತಿ ಶನಿವಾರ ಪಿಯುಸಿ ಪರೀಕ್ಷೆ ನಡೆಸುತ್ತೇವೆ. ತಿಂಗಳಿಗೊಮ್ಮೆ ಯುನಿಟ್ ಪರೀಕ್ಷೆ, ಮೂರು ತಿಂಗಳಿಗೊಮ್ಮೆ ಪರೀಕ್ಷೆ ಅಂತಿಮವಾಗಿ ಅಗಸ್ಟ್, ಸೆಪ್ಟಂಬರ್, ಅಕ್ಟೋಬರ್‌ನಲ್ಲಿ ಮೂರು ಪರೀಕ್ಷೆ ನಡೆಸಿ ಸಿಇಟಿ ತರಬೇತಿ ನೀಡುತ್ತೇವೆ ಎಂದರು.

ಈ ವೇಳೆ ಪ್ರಾಚಾರ್ಯರಾದ ಶೋಭಾ, ವಿನಯ್ ಚಿಕ್ಕಟ್ಟಿ ಉಪಸ್ಥಿತರಿದ್ದರು.

> ನಗರದ ಚಿಕ್ಕಟ್ಟಿ ಸಂಸ್ಥೆಯೊಂದಿಗೆ ಕೂಡಿ ಪಿಯು ಕಾಲೇಜಿಗೆ ಶಿಕ್ಷಕರನ್ನು ನಾವೇ ನೇಮಿಸುತ್ತಿದ್ದೇವೆ. ಮೊದಲು ಶಿಕ್ಷಕರನ್ನು ಪರೀಕ್ಷಿಸಿ ನಂತರ ಅವರನ್ನು ನೇಮಕ ಮಾಡಿಕೊಳ್ಳಲಾಗುವುದು. ಪ್ರತಿ ವಾರ ಚಿಕ್ಕಟ್ಟಿ ಶಿಕ್ಷಣ ಸಂಸ್ಥೆಯಲ್ಲಿ ನಡೆಯುವ ಪಿಯುಸಿ ಪರೀಕ್ಷೆಗಳಿಗೆ ಬಳ್ಳಾರಿಯಿಂದ ಪ್ರಶ್ನೆ ಪತ್ರಿಕೆ ಕಳುಹಿಸಿ ಕೊಡುತ್ತೇವೆ.
>
> - ಡಾ. ಪಿ.ರಾಧಾಕೃಷ್ಣ.
> ಅಧ್ಯಕ್ಷರು, ಶ್ರೀ ಚೈತನ್ಯ ಸಮೂಹ ಶಿಕ್ಷಣ ಸಂಸ್ಥೆ, ಬಳ್ಳಾರಿ.

# ಮೂವರು ಸಾಧಕರಿಗೆ ಗೌರವ ಡಾಕ್ಟರೇಟ್



**■ವಿಜಯಸಾಕ್ಷಿ ಸುದ್ದಿ, ವಿಜಯಪುರ**

ಇಲ್ಲಿಯ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದಲ್ಲಿ ಗುರುವಾರ ಜರುಗಿದ 16ನೇ ಘಟಿಕೋತ್ಸವದಲ್ಲಿ ಕುಲಪತಿ ಪ್ರೊ. ಬಿ.ಕೆ. ತುಳಸಿಮಾಲ ಅವರು ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿರುವ ಮೂವರು ಸಾಧಕರಿಗೆ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಿದರು.

ಕಲಾಕ್ಷೇತ್ರದ ಸಾಧನೆಗಾಗಿ ಶಿಗ್ಗಾವಿಯ ಗೋಟಗೋಡಿ ರಾಕ್‌ಗಾರ್ಡನ್‌ನ ವೇದರಾಣಿ ದಾಸನೂರು, ಸಾಹಿತ್ಯ ಕ್ಷೇತ್ರದ ಸಾಧನೆಗಾಗಿ ಕಲಬುರಗಿಯ ವಿಶ್ರಾಂತ ಪ್ರಾಧ್ಯಾಪಕಿ ಡಾ. ಮೀನಾಕ್ಷಿ ಬಾಳಿ ಮತ್ತು ಸಿನಿಮಾ ಕ್ಷೇತ್ರದ ಸಾಧನೆಗಾಗಿ ಬೆಂಗಳೂರಿನ ಖ್ಯಾತ ಚಲನಚಿತ್ರ ನಟಿ ತಾರಾ ಅವರಿಗೆ ಕುಲಪತಿಗಳು ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಿದರು.

ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿದ್ದ ನವದೆಹಲಿಯ ರಾಷ್ಟ್ರೀಯ ಶೈಕ್ಷಣಿಕ ಯೋಜನೆ ಮತ್ತು ಆಡಳಿತ ಸಂಸ್ಥೆಯ ಕುಲಪತಿ ಪ್ರೊ. ಶಶಿಕಲಾ ವಂಜಾರಿ, ಕುಲಸಚಿವ ಶಂಕರಗೌಡ ಸೋಮನಾಳ, ಮೌಲ್ಯಮಾಪನ ಕುಲಸಚಿವ ಪ್ರೊ. ಎಚ್.ಎಂ. ಚಂದ್ರಶೇಖರ್, ಸಿಂಡಿಕೇಟ್ ಸದಸ್ಯರು, ಅಕಾಡೆಮಿಕ್ ಕೌನ್ಸಿಲ್ ಸದಸ್ಯರು, ವಿವಿಧ ನಿಕಾಯಗಳ ಡೀನ್‌ರು ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ಇದಕ್ಕೂ ಮುನ್ನ ವೇದರಾಣಿ ದಾಸನೂರು ಅವರ ಪರಿಚಯವನ್ನು ಡಾ.ರೋಹಿಣಿ ಭೂಸನೂರಮಠ, ಡಾ. ಮೀನಾಕ್ಷಿ ಬಾಳಿ ಅವರ ಪರಿಚಯವನ್ನು ಡಾ. ರೇಣುಕಾ ಮೇಟಿ ಮತ್ತು ತಾರಾ ಅವರ ಪರಿಚಯವನ್ನು ಡಾ. ರಾಜು ಬಾಗಲಕೋಟ ಮಾಡಿಕೊಟ್ಟರು.

ಘಟಿಕೋತ್ಸವದ ಆರಂಭದಲ್ಲಿ ನಡೆದ ಮೆರವಣಿಗೆಯ ನೇತೃತ್ವವನ್ನು ಮೌಲ್ಯಮಾಪನ ಕುಲಸಚಿವ ಪ್ರೊ. ಎಚ್.ಎಂ.ಚಂದ್ರಶೇಖರ್ ವಹಿಸಿದ್ದರು. ಪ್ರಾಧ್ಯಾಪಕ ಪ್ರೊ.ವಿಷ್ಣು ಶಿಂದೆ ಮತ್ತು ಡಾ.ಅಶ್ವಿನಿ ಕೆ.ಎನ್. ಕಾರ್ಯಕ್ರಮ ನಿರೂಪಿಸಿದರು.

# ಯುವನಿಧಿ ಯೋಜನೆಗೆ ನೋಂದಣಿ ಆರಂಭ

**■ವಿಜಯಸಾಕ್ಷಿ ಸುದ್ದಿ, ಗದಗ**

2022-23 ಹಾಗೂ 2023-24 ಸಾಲಿನಲ್ಲಿ ಪದವಿ/ ಸ್ನಾತಕೊತ್ತರ ಪದವಿ ಮತ್ತು ಡಿಪ್ಲೋಮಾ ತೇರ್ಗಡೆ ಹೊಂದಿದ ನಿರುದ್ಯೋಗ ಅಭ್ಯರ್ಥಿಗಳನ್ನು ಯುವನಿಧಿ ಯೋಜನೆಯಡಿಯಲ್ಲಿ ( 1ಣಣಠಿ:// ಜತಭುಟಜುಣಾ.ಇಚಿಡಿಟಚಿಣಚಿ-ಇಚಿ.ರಚಿತ.ಎಟಿ ) ಸೇವಾಸಿಂಧು ಪೋರ್ಟಲ್‌ನಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ಜ. 20 ರವರೆಗೆ ವಿಶೇಷ ನೋಂದಣಿ ಅಭಿಯಾನವನ್ನು ಆರಂಭಿಸಲಾಗಿದೆ.

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವ್ಯಾಪ್ತಿಯ ವಿಶ್ವವಿದ್ಯಾಲಯ, ಸರ್ಕಾರಿ/ ಅನುದಾನಿತ ಪದವಿ/ಸ್ನಾತಕೋತ್ತರ ಪದವಿ ಮತ್ತು ಡಿಪ್ಲೊಮಾ, ಕಾಲೇಜುಗಳಲ್ಲಿ ಮತ್ತು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೋಂದಣಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಅರ್ಹ ಫಲಾನುಭವಿಗಳು ಈ ಸದಾವಕಾಶವನ್ನು ಸದುಪಯೋಗ ಪಡೆದುಕೊಳ್ಳಬಹುದು.

ಪದವೀದರರಿಗೆ ಪ್ರತಿ ತಿಂಗಳು ರೂ.3000/- ಹಾಗೂ ಡಿಪ್ಲೋಮಾದರರಿಗೆ ಪ್ರತಿ ತಿಂಗಳು ರೂ.1500/- ನಿರುದ್ಯೋಗಿ ಭತ್ಯೆಯನ್ನು ನೀಡಲಾಗುತ್ತದೆ. ಫಲಿತಾಂಶದ ನಂತರ ನಿರುದ್ಯೋಗಿಗಳಾಗಿ 180 ದಿನಗಳು ಪೂರೈಸಿ ಹೆಸರನ್ನು ನೋಂದಾಯಿಸಿಕೊಂಡ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುತ್ತದೆ. ನಂತರ ಮಾಹೆವಾರು ಯುವನಿಧಿ ಯೋಜನೆಯ ಪ್ರಯೋಜನವನ್ನು ಪಡೆಯಬೇಕಿದ್ದರೆ, ಸೇವಾ ಸಿಂಧು ಪೋರ್ಟಲ್‌ನಲ್ಲಿ ಪ್ರತಿ ತಿಂಗಳು ತಾನು ನಿರುದ್ಯೋಗಿಯೆಂದು ಮತ್ತು ಉನ್ನತ ವ್ಯಾಸಂಗ ಮುಂದುವರೆಸುತ್ತಿಲ್ಲವೆಂದು ಹಾಗೂ ಸ್ವಯಂ ಉದ್ಯೋಗವಿಲ್ಲವೆಂದು ಪ್ರತಿ ತಿಂಗಳು 25ನೇ ತಾರೀಖಿನೊಳಗಾಗಿ ಸ್ವಯಂ ಘೋಷಣೆ ಆಧಾರದ ಮೇಲೆ ಅಭ್ಯರ್ಥಿಗಳು ಮುಂದಿನ ಪಾವತಿಯನ್ನು ಸ್ವೀಕರಿಸಬಹುದಾಗಿದೆ.

ಅಭ್ಯರ್ಥಿಗಳು ಕರ್ನಾಟಕ ಒನ್/ ಗ್ರಾಮ ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳಲ್ಲಿ ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸಬಬೇಕು, ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಕಡ್ಡಾಯವಾಗಿ ಆಧಾರ್ ಸೀಡೆಡ್ ಬ್ಯಾಂಕ್ ಖಾತೆ ಹಾಗೂ ಆಧಾರ್ ಲಿಂಕ್ ಮೊಬೈಲ್ ಸಂಖ್ಯೆಯನ್ನು ಹೊಂದಿರಬೇಕು, ಅರ್ಜಿ ಸಲ್ಲಿಸಿದ ನಂತರ ಸೇವಾ ಸಿಂಧು ಪೋರ್ಟಲ್‌ನಲ್ಲಿ ತಮ್ಮ ಅರ್ಜಿಯು ಯಾವ ಹಂತದಲ್ಲಿದೆ ಎಂಬುದನ್ನು ಪರಿಶೀಲಿಸಿಕೊಳ್ಳಬೇಕು, ಒಂದು ವೇಳೆ ಅರ್ಜಿಯು ಅಪ್ರೂವಲ್ ಆಗದ ಸಂದರ್ಭದಲ್ಲಿ ಅರ್ಜಿಯ ಪರಿಶೀಲನೆ ಮಾಡಿಕೊಳ್ಳಬೇಕಾಗಿರುತ್ತದೆ ಮತ್ತು ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಉದ್ಯೋಗಾಧಿಕಾರಿ ಕಚೇರಿ, ದೂ ಸಂ-08372220609 ಗೆ ಸಂಪರ್ಕಿಸಬಹುದಾಗಿದೆ.

# ಶಿಸ್ತುಬದ್ಧ ಆಚರಣೆಗೆ ಆದ್ಯತೆ ನೀಡಿ

▶▶ಮೊದಲನೇ ಪುಟದಿಂದ

ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಗಣರಾಜ್ಯೋತ್ಸವ ದಿನಾಚರಣೆಯ ಕುರಿತಂತೆ ಕಳೆದ ವರ್ಷದ ಸಭಾ ನಡುವಳಿಯ ಅಂಶಗಳನ್ನು ಸಭೆಯ ಮುಂದಿಡುತ್ತಾ, ಪ್ರಸಕ್ತ ವರ್ಷ ವಿವಿಧ ಇಲಾಖಾಧಿಕಾರಿಗಳು ನಿರ್ವಹಿಸಬೇಕಾದ ಜವಾಬ್ದಾರಿಗಳನ್ನು ತಿಳಿಸಿದರು.

ಸಭೆಯಲ್ಲಿ ಸಾಂಸ್ಕೃತಿಕ ಕಾರ್ಯಕ್ರಮದ ವ್ಯವಸ್ಥೆ, ಎನ್‌ಎಸ್‌ಎಸ್ ಹಾಗೂ ಎನ್‌ಸಿಸಿ ಪರೇಡ್, ಮೂಲಭೂತ ಸೌಕರ್ಯಗಳ ವ್ಯವಸ್ಥೆ, ವೇದಿಕ ನಿರ್ಮಾಣ, ಆಸನದ ವ್ಯವಸ್ಥೆ, ಆಂಬುಲೆನ್ಸ್ ವ್ಯವಸ್ಥೆ ಮುಂತಾದ ವಿಷಯಗಳ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಉಪವಿಭಾಗಾಧಿಕಾರಿ ಗಂಗಪ್ಪ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸವರಾಜ ಕೊಟ್ಟೂರ, ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ವಿನೋದಕುಮಾರ್ ಹೆಗ್ಗಳಗಿ, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಲೋಕೋಪಯೋಗಿ ಇಲಾಖೆಯ ಕಾರ್ಯಕಾರಿ ಅಭಿಯಂತರರಾದ ರಮೇಶ ಪಾಟೀಲ, ಭೂ ದಾಖಲೆ ಇಲಾಖೆ ಉಪನಿರ್ದೇಶಕ ರುದ್ರಗೌಡ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ನಡುರಸ್ತೆಯಲ್ಲೇ ಹೊತ್ತಿ ಉರಿದ ಕಾರು: ತಪ್ಪಿದ ದುರಂತ!



**■ವಿಜಯಸಾಕ್ಷಿ ಸುದ್ದಿ, ವಿಜಯಪುರ**

ನಡುರಸ್ತೆಯಲ್ಲೇ ಓಮಿನಿ ಕಾರೊಂದು ಸುಟ್ಟುಕರಕಲಾದ ಘಟನೆ ಜಿಲ್ಲೆಯ ಬಸವನ ಬಾಗೇವಾಡಿ ತಾಲೂಕಿನ ಉಕ್ಕಲಿ ಗ್ರಾಮದ ಬಳಿ ಜರುಗಿದೆ.

ಬಸಯ್ಯ ಹಿರೇಮಠ ಎಂಬವರಿಗೆ ಸೇರಿದ ಓಮಿನಿ ವಾಹನ ಸುಟ್ಟು ಭಸ್ಮವಾಗಿದ್ದು, ಇವರು ವಿಜಯಪುರ ಮೂಲದವರು ಎಂದು ತಿಳಿದು ಬಂದಿದೆ.

ಉಕ್ಕಲಿ ಗ್ರಾಮದಿಂದ ಸಂಬಂಧಿಕರನ್ನು ಕರೆದುಕೊಂಡು ಎಡೆಯೂರಿಗೆ ಹೊರಟಿದ್ದ ವೇಳೆ ಈ ಘಟನೆ ಸಂಭವಿಸಿದೆ. ಚಲಿಸುತ್ತಿದ್ದ ವಾಹನದಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಳ್ಳುತ್ತಿದ್ದಂತೆ ವಾ ಹ ನ ದ ಲ್ಲಿ ದ್ದ ವ ರು ಕೆಳಗಿಳಿದಿದ್ದಾರೆ.

ಸ್ಥಳಕ್ಕೆ ಅಗ್ನಿ ಶಾಮಕ ಸಿಬ್ಬಂದಿ ದೌಡಾಯಿಸಿದ್ದು, ಬರುವ ಮೊದಲೆ ವಾಹನ ಸುಟ್ಟು ಕರಕಲಾಗಿದೆ. ಘಟನೆಯಲ್ಲಿ ಯಾವುದೇ ಪ್ರಾಣಹಾನಿಯಾಗಿಲ್ಲ. ಸ್ಥಳೀಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಚಿತ್ರಸಂತೆಯಲ್ಲಿ ವಿದ್ಯಾರ್ಥಿಗಳ ಸಾಧನೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಬೆಂಗಳೂರಿನ ಚಿತ್ರಕಲಾ ಪರಿಷತ್ತು ಆಯೋಜಿಸುವ ರಾಜ್ಯದ ಪ್ರತಿಷ್ಠಿತ ಚಿತ್ರಕಲಾ ಸಂತೆಯನ್ನು ಇತ್ತೀಚೆಗೆ ಬೆಂಗಳೂರಿನ ಕುಮಾರ ಕೃಪಾ ರಸ್ತೆಯಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು. ಈ ಸಂತೆಯಲ್ಲಿ ರಾಜ್ಯ-ಹೊರ ರಾಜ್ಯದ, ರಾಷ್ಟ್ರಮಟ್ಟದ ಕಲಾವಿದರು ತಮ್ಮ ಕಲಾಕೃತಿಗಳೊಂದಿಗೆ ಭಾಗವಹಿಸಿ ಕಲಾಕೃತಿಗಳ ಅದ್ದೂರಿ ಮಾರಾಟ ಮಡುವರು. ಲಕ್ಷಕ್ಕಿಂತಲೂ ಅಧಿಕ ಜನ ಈ ಸಂತೆಯಲ್ಲಿ ಪಾಲ್ಗೊಳ್ಳುವರು.



ಕಲೆಗೆ ಮತ್ತು ಕಲಾವಿದರಿಗೆ ಮಾರುಕಟ್ಟೆ ರೂಪಿಸುವಲ್ಲಿ ಈ ಚಿತ್ರಸಂತೆ ಸಹಕಾರಿಯಾಗಿದೆ. ಇಂತಹ ಕಲಾ ಜಾತ್ರೆಯಲ್ಲಿ ವಿಜಯ ಲಲಿತಕಲಾ ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಿ ಹಲವಾರು ಕಲಾಕೃತಿಗಳನ್ನು ಮಾರಾಟ ಮಾಡಿ ಯಶಸ್ವಿಯಾಗಿದ್ದಾರೆ. ಈ ಸಂತೆಯಲ್ಲಿ ಭಾಗವಹಿಸಿದ ಎಲ್ಲಾ ವಿದ್ಯಾರ್ಥಿಗಳಿಗೆ ಸಂಸ್ಥೆಯ ಅಧ್ಯಕ್ಷರಾದ ಪ್ರೊ ಅಶೋಕ ಅಕ್ಕಿ, ಕಾರ್ಯದರ್ಶಿ ಪ್ರೊ. ಸಂತೋಷ ಅಕ್ಕಿ ಹಾಗೂ ಪ್ರಾಚಾರ್ಯರು, ಸಿಬ್ಬಂದಿವರ್ಗ ಅಭಿನಂದಿದ್ದಾರೆ.

# ಅಭಿವೃದ್ಧಿ ಕಾರ್ಯಗಳು ಶೂನ್ಯ



**■ವಿಜಯಸಾಕ್ಷಿ ಸುದ್ದಿ, ಗದಗ**

ಮುಂಡರಗಿ ಕಾರ್ಯನಿರ್ವಾಹಕ ಅಧಿಕಾರಿಗಳು, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳ ನಿರ್ಲಕ್ಷ್ಯದ ಕುರಿತು ಗದಗ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಬಣದ ಗದಗ ಜಿಲ್ಲಾಧ್ಯಕ್ಷ ಗವಿಸಿದ್ದಪ್ಪ ಎಸ್.ಹ್ಯಾಟಿ ನೇತೃತ್ವದಲ್ಲಿ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಗವಿಸಿದ್ದಪ್ಪ ಹ್ಯಾಟಿ ಮಾತನಾಡಿ, ಮುಂಡರಗಿಯಂತಹ ಹಿಂದುಳಿದ ಪ್ರದೇಶಕ್ಕೆ ಬರುವ ಅಧಿಕಾರಿಗಳು ಅಭಿವೃದ್ಧಿ ಕಡೆಗೆ ಗಮನ ಕೊಡದೆ ತಮಗೆ ಬೇಕಾದಾಗ, ಬೇಕಾದ ರೀತಿಯಲ್ಲಿ ಬಂದು, ಸಭೆ ಮಾಡಿ ತೆರಳುತ್ತಾರೆ. ಆದರೆ ಗ್ರಾಮೀಣ ಭಾಗದಲ್ಲಿನ ಜನ ಸಾಮಾನ್ಯರ ಗೋಳು ಕೇಳುವವರು ಯಾರೂ ಇಲ್ಲದಂತಾಗಿದೆ. ಮುಂಡರಗಿ ತಾಲೂಕಿನಲ್ಲಿ ಒಟ್ಟು 19 ಗ್ರಾಮ ಪಂಚಾಯಿತಿಗಳಿದ್ದು, ಅಭಿವೃದ್ಧಿ ಕಾರ್ಯಗಳು ಶೂನ್ಯ ಎಂದು ಆರೋಪಿಸಿದರು.

ಹಾಲಪ್ಪ ಅರಹುಣಸಿ ಮಾತನಾಡಿ, ಮುಂಡರಗಿ ತಾಲೂಕು ಕಚೇರಿಯಲ್ಲಿರುವ ಮಹಾತ್ಮ ಗಾಂಧೀಜಿ ಮೂರ್ತಿಯು ಮೂರು ವರ್ಷದಿಂದ ಬಣ್ಣದಿಂದ ವಿರೂಪಗೊಂಡಿದ್ದು, ಅದೇ ಮೂರ್ತಿಗೆ ಹಾರ ಹಾಕಿ ಗಾಂಧಿ ಜಯಂತಿಯನ್ನು ಆಚರಿಸಿದ್ದಾರೆ. ಇದು ರಾಷ್ಟ್ರಪಿತನಿಗೆ ಮಾಡಿದ ಅವಮಾನವಾಗಿದ್ದು, ಇದು ಶಿಕ್ಷಾರ್ಹ ಅಪರಾಧವಾಗಿರುತ್ತದೆ. ಈ ಬಗ್ಗೆ ಯೋಗ್ಯ ಕ್ರಮ ತೆಗೆದುಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ತಿಪ್ಪಣ್ಣ ಕಟ್ಟಿಮನಿ, ಶ್ರೀಧರ ಕೋಮಾಲಾಪುರ, ಶಿರಹಟ್ಟಿ, ಶ್ರೀನಿವಾಸ ಪ. ಕೊರ್ಲಗಡ್ಡಿ, ಕೃಷ್ಣಾ ಟಿ.ಗವಿಯಪ್ಪನವರ, ಎಸ್. ಎಚ್. ಶಿವಶಿಂಪಗೇರ, ಮಾಬುಸಾಬ ಢಾಲಾಯತ ಉಪಸ್ಥಿತರಿದ್ದರು.

# ವಿಶೇಷ ಚೇತನ ಮಕ್ಕಳಿಗೆ ಅರಿವು ಕಾರ್ಯಕ್ರಮ

**■ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿಗಳಲ್ಲಿ ಕಂಡುಬರುವ ಕೆಲವು ನ್ಯೂನ್ಯತೆಗಳನ್ನು ಪಾಲಕರು ಬಾಲ್ಯದಲ್ಲಿಯೇ ಗುರುತಿಸಿ ತಜ್ಞ ವೈದ್ಯರನ್ನು ಸಂಪರ್ಕಿಸಿ, ಚಿಕಿತ್ಸೆ ಕೊಡಿಸಿದಲ್ಲಿ ಮಕ್ಕಳು ಸುಧಾರಣೆಗೊಂಡು ಸಾಮಾನ್ಯ ಮಕ್ಕಳಾಗುವ ಸಾಧ್ಯತೆಯಿದೆ ಎಂದು ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಅಧ್ಯಕ್ಷ ನಿತೀಶ್ ಸಾಲಿ ಹೇಳಿದರು.

ಅವರು ಗುರುವಾರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಹಾಗೂ ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ಗಳ ಸಂಯುಕ್ತ ಆಶ್ರಯದಲ್ಲಿ ಗದಗ ಒಕ್ಕಲಗೇರಿಯ ಸರ್ಕಾರಿ ಶಾಲೆಗಳಲ್ಲಿ ನಡೆದ ವಿಶೇಷ ಚೇತನ ಮಕ್ಕಳಿಗಾಗಿ ಪರಿಸರ ನಿರ್ಮಾಣ ಹಾಗೂ ಸಮನ್ವಯತೆ ಕುರಿತು ನಡೆದ ಅರಿವು ಸಮಾರಂಭದಲ್ಲಿ ಭಿತ್ತಿಪತ್ರ ಉದ್ಘಾಟಿಸಿ ಮಾತನಾಡಿದರು.




ವಿಶೇಷ ಚೇತನರು ಸಮಾಜದ ಮುಖ್ಯವಾಹಿನಿಗೆ ಬರಬೇಕು. ಅವರಿಗೆ ಪ್ರೋತ್ಸಾಹದ ಅಗತ್ಯವಿದೆ. ಸರ್ಕಾರದ ಸೌಲಭ್ಯಗಳೊಂದಿಗೆ ಸೂಕ್ತ ವಾತಾವರಣ ಅವಶ್ಯ. ಸಮುದಾಯವು ಈ ಮಕ್ಕಳ ಶ್ರೇಯೋಭಿವೃದ್ಧಿಗಾಗಿ ಕೈ ಜೋಡಿಸಬೇಕು ಎಂದರು.

ಸಂಪನ್ಮೂಲ ವ್ಯಕ್ತಿ ಕವಿತಾ ಬೆಲೇರಿ ಮಾತನಾಡಿ, ವಿಶೇಷ ಮಕ್ಕಳು ವಿಶೇಷ ಪ್ರತಿಭೆಯುಳ್ಳವರು. ಅವರಿಗೆ ಪ್ರೋತ್ಸಾಹ ದೊರೆತಲ್ಲಿ ಅವರೂ ಸಾಧಿಸಬಲ್ಲರು. ಕಲಿಕಾ ಪೂರಕ ವಾತಾವರಣ, ಉತ್ತಮ ಪರಿಸರ ನಿರ್ಮಾಣ ಕಾರ್ಯ ನಡೆಯಬೇಕು. ಅಂದಾಗ ಈ ಮಕ್ಕಳು ಕಲಿಕೆಯಲ್ಲಿ ಪ್ರಗತಿ ಕಂಡು ಸಾಧಿಸಬಲ್ಲರು ಎಂದರು.

ಶಾಲಾ ಮುಖ್ಯೋಪಾಧ್ಯಾಯ ವಾಯ್.ಹೆಚ್. ಹನುಮಂತಗೌಡ್ರ ಮಾತನಾಡಿ, ಸಂಘ-ಸಂಸ್ಥೆಗಳು ಸರ್ಕಾರಿ ಶಾಲೆಗಳತ್ತ ಬಂದು ವಿಶೇಷ ಚೇತನರ ಬಗೆಗೆ ಸಮುದಾಯದಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮ ನೀಡುತ್ತಿರುವುದು ಹೆಮ್ಮೆಯ ಸಂಗತಿ ಎಂದರು.

ಗದಗ-ಬೆಟಗೇರಿ ಲಯನ್ಸ ಕ್ಲಬ್‌ನ ಸದಸ್ಯರು ಹಾಗೂ ಶಾಲಾ ಶಿಕ್ಷಕರು ಉಪಸ್ಥಿತರಿದ್ದರು.

16ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ

# ರಾಯಭಾರಿಯಾಗಿ ಕಿಶೋರ ನೇಮಕ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕನ್ನಡದ ಹೆಸರಾಂತ ಚಲನಚಿತ್ರ ನಟ ಕಿಶೋರ್ ಕುಮಾರ್ ಜಿ ಅವರು 16ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ ರಾಯಭಾರಿಯಾಗಿ ನೇಮಕಗೊಂಡಿದ್ದಾರೆ.

ಈ ಕುರಿತು ಕರ್ನಾಟಕ ಸರ್ಕಾರ ಆದೇಶ ಹೊರಡಿಸಿದ್ದು, 2024-2025ನೇ ಸಾಲಿನಲ್ಲಿ 16ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವವನ್ನು 2025ರ ಮಾರ್ಚ್ 1ರಿಂದ 8ರವರೆಗೆ ಬೆಂಗಳೂರಿನಲ್ಲಿ ಆಯೋಜಿಸಿದೆ. ಚಿತ್ರೋತ್ಸವದ ಕುರಿತು ಹೆಚ್ಚಿನ ಪ್ರಚಾರದ ಸಲುವಾಗಿ ಹಿಂದಿ ಹಾಗೂ ದಕ್ಷಿಣ ಭಾರತದ ಎಲ್ಲಾ ಭಾಷೆಗಳಲ್ಲಿ ನಟಿಸಿ ಜನಮನ್ನಣೆ ಪಡೆದಿರುವ ಕನ್ನಡದ ಖ್ಯಾತ ನಟ ಕಿಶೋರ್ ಕುಮಾರ್ ಜಿ ಇವರನ್ನು ಚಿತ್ರೋತ್ಸವದ 16ನೇ ಆವೃತ್ತಿಗೆ ರಾಯಭಾರಿಯಾಗಿ ನೇಮಿಸಿರುವುದಾಗಿ ಆದೇಶದಲ್ಲಿ ತಿಳಿಸಿದೆ.

ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ಬೆಲ್ಜಿಯಂ ನ FIAPF ಅಂತಾರಾಷ್ಟ್ರೀಯ ಮನ್ನಣೆ ಪಡೆದಿರುವ ಚಿತ್ರೋತ್ಸವವಾಗಿದ್ದು, ಸುಮಾರು 8 ದಿನಗಳ ಕಾಲ ಬೆಂಗಳೂರಿನ 13 ಚಿತ್ರಮಂದಿರಗಳಲ್ಲಿ ದೇಶ-ವಿದೇಶಗಳ ಅತ್ಯುನ್ನತ ಚಿತ್ರಗಳ ಪ್ರದರ್ಶನ ಹಾಗೂ ಚಲನಚಿತ್ರಗಳಿಗೆ ಸಂಬಂಧಿಸಿದಂತೆ ಕಾರ್ಯಾಗಾರಗಳು, ವಿಚಾರ ಸಂಕಿರಣ ಇನ್ನಿತರ ಚಿತ್ರರಂಗಕ್ಕೆ ಪೂರಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ.

16ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ ಸಂಘಟನಾ ಸಮಿತಿಯ ಅಧ್ಯಕ್ಷರೂ ಆಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇತ್ತೀಚೆಗಷ್ಟೆ ಸಭೆ ನಡೆಸಿ, ಚಿತ್ರೋತ್ಸವದ ದಿನಾಂಕ ಘೋಷಿಸಿದ ಬಳಿಕ ಸುದ್ದಿಗೋಷ್ಠಿಯಲ್ಲಿ, 16ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ 'ಸರ್ವ ಜನಾಂಗದ ಶಾಂತಿಯ ತೋಟ' ಶೀರ್ಷಿಕೆಯಡಿ ಪ್ರಸಕ್ತ ಸಾಲಿನಲ್ಲಿ ನಡೆಯುತ್ತಿದ್ದು, ಚಿತ್ರೋತ್ಸವಕ್ಕೆ ದೇಶ-ವಿದೇಶಗಳಿಂದ ಅತ್ಯುನ್ನತ ಚಿತ್ರಗಳನ್ನು ತರುವ ಕುರಿತು ಹಾಗೂ ದೇಶ-ವಿದೇಶಗಳ ಸಿನಿಮಾ ರಂಗದ ಗಣ್ಯಾತಿಗಣ್ಯರನ್ನು ಚಿತ್ರೋತ್ಸವದಲ್ಲಿ ಭಾಗವಹಿಸಲು ಕ್ರಮ ಕೈಗೊಂಡಿರುವುದಾಗಿ ತಿಳಿಸಿದ್ದರು.

# ಇಂದು ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಜ.19 ರಂದು ಆಚರಿಸಲಾಗುವ ಮಹಾಯೋಗಿ ವೇಮನ ಜಯಂತಿಯ ನಿಮಿತ್ತ ಜ. 10 ರಂದು ಸಂಜೆ 4ಕ್ಕೆ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಡವೀಂದ್ರ ಮಠದ ಶಿವಾನುಭವ ಗೋಷ್ಠಿಯಲ್ಲಿ ದಿನೇಶ ಎಂ ಅಭಿಮತ

# ಸಿರಿಧಾನ್ಯಗಳು ಪೌಷ್ಟಿಕಾಂಶಗಳ ಕಣಜ

■ವಿಜಯಸಾಕ್ಷಿ ಸುದ್ದಿ, ಗದಗ

ಸಿರಿಧಾನ್ಯಗಳು ಪೌಷ್ಟಿಕಾಂಶಗಳ ಕಣಜಗಳಾಗಿವೆ. ಜೀವಿಗಳ ಸದೃಢ ಆರೋಗ್ಯಕ್ಕೆ ಬೇಕಾಗುವ ಪೌಷ್ಟಿಕ ಜೀವಸತ್ವಗಳು ಈ ಧಾನ್ಯಗಳಲ್ಲಿವೆ. ನಮ್ಮ ಆಹಾರ ಪದ್ಧತಿಯಲ್ಲಿ ಬಹು ಉಪಯೋಗಿ ಆದ ಸಿರಿಧಾನ್ಯಗಳು ಪುರಾತನ ಧಾನ್ಯಗಳಾಗಿದ್ದು, ನಮ್ಮ ಆರೋಗ್ಯಕ್ಕೆ ಸಂಜೀವಿನಿಯಾಗಿವೆ ಎಂದು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ನಿರ್ದೇಶಕ ದಿನೇಶ ಎಂ ಹೇಳಿದರು.

ಅವರು ಗದುಗಿನ ಅಡವೀಂದ್ರ ಸ್ವಾಮಿ ಮಠದಲ್ಲಿ ಜರುಗಿದ 331ನೇ ಮಾಸಿಕ ಶಿವಾನುಭವ ಕಾರ್ಯಕ್ರಮದಲ್ಲಿ ಸಿರಿಧಾನ್ಯಗಳ ಮಹತ್ವ ವಿಷಯವಾಗಿ ಉಪನ್ಯಾಸ ನೀಡಿ ಮಾತನಾಡಿದರು.

ಸಿರಿಧಾನ್ಯಗಳಲ್ಲಿ ಅಪಾರವಾದ ಆರೋಗ್ಯಪುಷ್ಟಿ ಇರುವುದರಿಂದ ಇದನ್ನು ಸಿರಿಧಾನ್ಯವೆಂದು ಕರೆಯುತ್ತೇವೆ. ಸಿರಿ ಎಂದರೆ ಸಂಪತ್ತು ಧಾನ್ಯ ಎಂದರೆ ಕಾಳುಗಳು. ಪೌಷ್ಟಿಕ ಅಂಶಗಳ ಸಂಪತ್ತಿನಿಂದ ತುಂಬಿರುವ ಕಾಳುಗಳು ಸಿರಿಧಾನ್ಯವಾಗಿದ್ದು, ಇವುಗಳ ಸೇವನೆ ಉತ್ತಮ ಆರೋಗ್ಯ, ಸದೃಢತೆ ಒದಗಿಸುತ್ತದೆ ಎಂಬುದು ಸಂಶೋಧನೆಗಳಿಂದಲೂ ತಿಳಿದುಬಂದಿದೆ ಎಂದರು.



ಸನ್ಮಾನಿತರಾಗಿ ಮಾತನಾಡಿದ ಜನಪದ ಕಲಾವಿದ ಗವಿಸಿದ್ಧಯ್ಯ ಹಳ್ಳಿಕೇರಿಮಠ, ಜನಪದ ಕಲೆ ಒಂದು ವಿಶಿಷ್ಟ ಕಲೆ ಹಾಗೂ ಬಹು ಗತ್ತಿನ ಕಲೆಯಾಗಿದೆ. ಜನಪದರು ತಮ್ಮ ಬದುಕಿನ ಅನುಭವಗಳನ್ನು ಹಾಡಿನ ರೂಪದಲ್ಲಿ ರಚಿಸಿ ಹಾಡಿದರು. ಸಿರಿಧಾನ್ಯಗಳ ಕುರಿತಾಗಿಯೂ ಜನಪದಲ್ಲಿ ಉಲ್ಲೇಖವಿದೆ ಎಂದರು.

ಇದೇ ಸಂದರ್ಭದಲ್ಲಿ ಗದುಗಿನ ರಾಣಿ ಚನ್ನಮ್ಮ ಸೌಹಾರ್ದ ಪತ್ತಿನ ಸಂಘದ ನೂತನ ವರ್ಷದ ದಿನದರ್ಶಿಕೆಯನ್ನು ಬಿಡುಗಡೆಗೊಳಿಸಲಾಯಿತು.

ಸಮ್ಮುಖ ವಹಿಸಿ ಮಾತನಾಡಿದ ಶ್ರೀಮಠದ ಧರ್ಮದರ್ಶಿ ಮಹೇಶ್ವರ ಸ್ವಾಮಿಗಳು ಹೊಸಳ್ಳಿಮಠ, ನಮ್ಮ ಹಿರಿಯರು ಬಳಸುವ ಆಹಾರಗಳಾದ ರಾಗಿ, ಜೋಳ, ಸಜ್ಜಿ, ನವಣೆ, ಸಾಮೆ, ಊದಲ ಮುಂದಾವುಗಳು ಸಿರಿಧಾನ್ಯಗಳಾಗಿದ್ದು ಇವುಗಳಲ್ಲಿ ನೀರಿನ ಅಂಶ ಹೆಚ್ಚಾಗಿರುತ್ತದೆ. ಅಡುಗೆಯೂ ರುಚಿಕಟ್ಟಾಗಿರುತ್ತದೆ. ಹೀಗಾಗಿ ಎಲ್ಲರೂ ಸಿರಿಧಾನ್ಯವನ್ನು ಬಳಸಬೇಕೆಂದರು.

ಅಧ್ಯಕ್ಷತೆಯನ್ನು ಶಿವಾನುಭವ ಸಮಿತಿಯ ಅಧ್ಯಕ್ಷ ಎಸ್.ಕೆ. ನಾಲತ್ವಾಡಮಠ ವಹಿಸಿದ್ದರು. ಪ್ರಸಾದ ಸೇವೆ ವಹಿಸಿದ್ದ ಪ್ರಮೀಳಾದೇವಿ ಬಳಿಗಾರ, ಎಂ.ಎಂ. ಜೋಗಿನ, ಶೇಖರಪ್ಪ ಹನಮನಾಳ, ಚನ್ನಬಸವ ಕಾಳಗಿ, ಸಿ.ಬಿ. ಮಾಳಗಿ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ಸಿದ್ಧಣ್ಣ ಜವಳಿ ಪ್ರಾರ್ಥಿಸಿದರು, ಪ್ರಕಾಶ ಬಂಡಿ ಸ್ವಾಗತಿಸಿದರು, ಯು.ಆರ್. ಭೂಸನೂರಮಠ ನಿರೂಪಿಸಿದರು. ಬಿ.ಬಿ. ತೋಟಗೇರ ವಂದಿಸಿದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಗದುಗಿನ ರಾಣಿ ಚನ್ನಮ್ಮ ಸೌಹಾರ್ದ ಪತ್ತಿನ ಸಂಘದ ಅಧ್ಯಕ್ಷ ಡಾ. ಎಸ್.ಕೆ. ಮ್ಯಾಗೇರಿ ಮಾತನಾಡಿ, ಸಿರಿಧಾನ್ಯಗಳು ಆರೋಗ್ಯಪೂರ್ಣ ಆಹಾರ ಪದಾರ್ಥಗಳು. ಮನುಷ್ಯ ಇಂದು ಬಾಯಿ ರುಚಿಗಾಗಿ ಕುರುಕಲು ತಿಂಡಿಗಳತ್ತ ಆಕರ್ಷಿತನಾಗಿದ್ದು, ಇದು ಆರೋಗ್ಯಕ್ಕೆ ಹಾನಿಕಾರಕ. ಪ್ರತಿಯೊಬ್ಬರೂ ಸಿರಿಧಾನ್ಯಗಳ ಸೇವನೆ ಮಾಡಿ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದರು.

ಅಡರಕಟ್ಟಿಯ ಸರಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳ ಸಂತೆ

# ಮೆಟ್ರಿಕ್ ಮೇಳದಿಂದ ಆತ್ಮಸ್ಥೈರ್ಯ ವೃದ್ಧಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಕ್ಕಳಿಗೆ ಸಾಮಾನ್ಯ ವ್ಯವಹಾರದ ಜ್ಞಾನ, ಸ್ವಾವಲಂಬಿ ಬದುಕು ಕಟ್ಟಿಕೊಳ್ಳುವ ಆತ್ಮಸ್ಥೈರ್ಯ ವೃದ್ಧಿಗೆ ಈ ಮಕ್ಕಳ ಸಂತೆ, ಮೆಟ್ರಿಕ್ ಮೇಳ ಸಹಕಾರಿಯಾಗಲಿದೆ ಎಂದು ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಎಸ್. ಹರ್ಲಾಪುರ ಹೇಳಿದರು. ಅವರು ಸಮೀಪದ ಅಡರಕಟ್ಟಿಯ ಸರಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಗುರುವಾರ 2024-25ನೇ ಸಾಲಿನ ಮಕ್ಕಳ ಸಂತೆ ಅಥವಾ ಮೆಟ್ರಿಕ್ ಮೇಳ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಇದು ನಮ್ಮ ಪಠ್ಯಕ್ಕೆ ಹತ್ತಿರವಾಗಿದೆ. ಸುಲಭವಾಗಿ ಅರ್ಥವಾಗುತ್ತದೆ. ಶಾಲೆಯಲ್ಲಿ ಕಲಿಯುವ ಗಣಿತದ ಜತೆಗೆ ಮಕ್ಕಳಿಗೆ ಬದುಕು ನಡೆಸಲು ಅಗತ್ಯವಾದ ವ್ಯವಹಾರಿಕ ಗಣಿತ ತಿಳಿಯಲು ಮೆಟ್ರಿಕ್ ಮೇಳಗಳು ಸಹಕಾರಿಯಾಗಿವೆ. ದಿನನಿತ್ಯದಲ್ಲಿ ವ್ಯಾಪಾರ-ವಹಿವಾಟಿನಲ್ಲಿ ತೊಡಗಿಸಿಕೊಳ್ಳುವ ಮಕ್ಕಳಲ್ಲಿ ವ್ಯಾಪಾರದ



ಮನೋಭಾವನೆ ಅರ್ಥ ಮಾಡಿಕೊಡುವದರಲ್ಲಿ ಮಕ್ಕಳ ಸಂತೆ ಹೆಚ್ಚು ಮಹತ್ವದ ಪಾತ್ರವನ್ನು ವಹಿಸುತ್ತದೆ ಎಂದರು. ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಅಧ್ಯಕ್ಷೆ ಜಯಶ್ರೀ ಭಂಗಿ, ಮುಖ್ಯ ಶಿಕ್ಷಕಿ ಎಸ್.ಹೆಚ್. ಉಮಚಗಿ, ಸಿಆರ್‌ಪಿ ಶಿವಾನಂದ ಅಸುಂಡಿ, ಪ್ರಧಾನ ಕಾರ್ಯದರ್ಶಿ ಚಂದ್ರು ನೇಕಾರ, ಬಿ.ಬಿ. ಯತ್ನಳ್ಳಿ, ಎಲ್.ಎನ್. ನಂದೆಣ್ಣವರ, ಡಿ.ಡಿ. ಲಮಾಣಿ, ಜಿಲ್ಲಾ ಶಿಕ್ಷಕರ ಸಂಘದ ಉಪಾಧ್ಯಕ್ಷ ಎಂ.ಎಸ್. ಹಿರೇಮಠ, ಮಾಂತೇಶ ಹವಳದ, ರವಿಕುಮಾರ ದೇವರಮನಿ, ಮೌನೇಶ ಶಿರಹಟ್ಟಿ ಹಾಗೂ ಶಾಲಾ ಸಿಬ್ಬಂದಿಗಳು, ರಂಭಾಪುರಿ ಪ್ರೌಢಶಾಲೆಯ ಪ್ರಧಾನ ಗುರುಮತೆಯರು, ಎಸ್‌ಡಿಎಂಸಿ ಸದಸ್ಯರು, ಊರಿನ ಗಣ್ಯರು, ತಾಯಂದಿರು, ಮಕ್ಕಳು ಹಾಜರಿದ್ದರು.

ಶಾಲೆಯ 1ರಿಂದ 7ನೇ ವರ್ಗದಲ್ಲಿ ಕಲಿಯುತ್ತಿರುವ 200 ಮಕ್ಕಳ ಪೈಕಿ ಸುಮಾರು 150ಕ್ಕೂ ಹೆಚ್ಚು ವಿದ್ಯಾರ್ಥಿಗಳು ಈ ಸಂತೆಯಲ್ಲಿ ಪಾಲ್ಗೊಂಡು ವ್ಯಾಪಾರ-ವಹಿವಾಟು ನಡೆಸಿದರು. ಮಕ್ಕಳು ತರಕಾರಿ, ಕಿರಾಣಿ, ಆಟಿಕೆ, ಸಿದ್ಧ ಉಡುಪುಗಳನ್ನು ಸಂತೆಯಲ್ಲಿ ವ್ಯಾಪಾರಸ್ಥರು ಮಾರಾಟ ಮಾಡುವಂತೆ ಮಾಡಿದ್ದು ವಿಶೇಷವಾಗಿತ್ತು. ಗ್ರಾಮದ ನಿವಾಸಿಗಳು ಸಂತೆಗೆ ಬಂದು ತಮಗೆ ಬೇಕಾದ ವಸ್ತುಗಳನ್ನು ಖರೀದಿಸಿದರು. ಮೆಟ್ರೀಕ್ ಮೇಳದಲ್ಲಿ ಮಕ್ಕಳು ವಿವಿಧ ವಸ್ತುಗಳ ವ್ಯಾಪಾರ ನಿರ್ವಹಿಸಿದರೆ, ಗ್ರಾಹಕರಾಗಿ ಪಾಲಕರು, ಸಾರ್ವಜನಿಕರು, ಶಿಕ್ಷಕರು ಪಾಲ್ಗೊಂಡರು.

ದಿನಪತ್ರಿಕೆಗಳ ಸಂಪಾದಕರ ಸಂಘದಿಂದ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಮನವಿ

# ಪತ್ರಕರ್ತ ರಾಮಾಂಜಿನಪ್ಪ ಮೇಲಿನ ಹಲ್ಲೆಗೆ ಖಂಡನೆ

■ವಿಜಯಸಾಕ್ಷಿ ಸುದ್ದಿ, ಗದಗ

ಪತ್ರಕರ್ತ ರಾಮಾಂಜಿನಪ್ಪರ ಮೇಲೆ ನಡೆದ ಹಲ್ಲೆಯನ್ನು ಖಂಡಿಸಿ ಜಿಲ್ಲೆಯ ಕಾರ್ಯನಿರತ ಪತ್ರಕರ್ತರ ಸಂಪಾದಕರ ಸಂಘದಿಂದ ಗುರುವಾರ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು.

ಅಕ್ರಮ ದಂಧೆಗಳ ಕುರಿತು ದಿಟ್ಟತನದಿಂದ ವರದಿ ಮಾಡಿದ್ದ ರಾಮಾಂಜಿನಪ್ಪ ಪಾವಗಡ ತಾಲೂಕಿನಲ್ಲಿ ಸಂಚಲನ ಮೂಡುವಂತೆ ಮಾಡಿದ್ದರು. ತಾಲೂಕಿನ ಪ್ರತಿಯೊಂದು ಸಮಸ್ಯೆಗಳ ಬಗ್ಗೆ, ಕೆಲವು ಮಾಫಿಯಾಗಳ ಬಗ್ಗೆ, ದಿಟ್ಟ ವರದಿಗಳನ್ನು ಬರೆಯುತ್ತಿದ್ದರು. ಪಾವಗಡ ನಗರದಲ್ಲಿ ಸಾರ್ವಜನಿಕ ಸ್ಥಳದಲ್ಲಿ ಸಂಪಾದಕ ರಾಮಾಂಜಿನಪ್ಪನವರ ಮೇಲೆ ನಡೆದಿರುವ ದೌರ್ಜನ್ಯ ಖಂಡನೀಯ. ತಮ್ಮ ಕರ್ತವ್ಯ ಮೀರಿ ರಾಜಕಾರಣಿಯ ಬಗೆ ವರದಿ ಮಾಡಿದ್ದರೆ ಅವರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಲು ಅವಕಾಶ ಇತ್ತು. ಆದರೆ ಯಾವುದೋ ಒಂದು ವರದಿಯನ್ನು ನೆಪ ಮಾಡಿಕೊಂಡು ಅವರ ಮೇಲೆ ಹಲ್ಲೆ ನಡೆಸಿರುವುದನ್ನು ಸಂಘವು ಖಂಡಿಸಿದೆ.



ರಾಮಾಂಜಿನಪ್ಪ ಅವರಿಗೆ ಸೂಕ್ತ ರಕ್ಷಣೆ ನೀಡಬೇಕಾಗಿದೆ. ಕೆಲ ಕಿಡಿಗೇಡಿಗಳಿಂದ ನಿಷ್ಠಾವಂತ ಸಂಪಾದಕ ಹಾಗೂ ಪತ್ರಕರ್ತರ ಆತ್ಮಸ್ಥೈರ್ಯ ಕುಗ್ಗಿಸುವಂತ ಪ್ರಯತ್ನ ನಡೆಯುತ್ತಿದೆ. ಗೃಹ ಸಚಿವರು ತಮ್ಮ ತವರು ಜಿಲ್ಲೆಯಲ್ಲಿ ನಡೆದಿರುವ ಘಟನೆ ನಾಗರಿಕ ಸಮಾಜ ತಲೆತಗ್ಗಿಸುವ ವಿಚಾರ ಎಂಬುದನ್ನು ಗಂಭೀರವಾಗಿ ಪರಿಗಣಿಸಿ ಸೂಕ್ತ ಕ್ರಮ ಜರುಗಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಂಘದ ರಾಜ್ಯ ಉಪಾಧ್ಯಕ್ಷ ಮಂಜುನಾಥ ಅಬ್ಬಿಗೇರಿ, ಜಿಲ್ಲಾಧ್ಯಕ್ಷ ಜಗದೀಶ ಎಸ್.ಪಿ., ಜಿಲ್ಲಾ ಉಪಾಧ್ಯಕ್ಷ ನಾಗೋಸಾ ಬಾಂಡಗೆ, ಪ್ರಧಾನ ಕಾರ್ಯದರ್ಶಿ ದೇವಪ್ಪ ಲಿಂಗದಾಳ, ಸದಸ್ಯರಾದ ಅಜಿತ್ ಹೊಂಬಾಳೆ, ಮಲ್ಲಿಕಾರ್ಜುನ ಮಾಳಗಿಮನಿ ಇದ್ದರು.

# 3ನೇ ಕರ್ನಾಟಕ ರಾಜ್ಯ ಯೋಗಾಸನ ಸ್ಪೋರ್ಟ್ಸ್ ಲೀಗ್

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಅಮೆಚೂರ್ ಯೋಗ ಸ್ಪೋರ್ಟ್ಸ್ ಅಸೋಸಿಯೇಶನ್ ಬೆಂಗಳೂರು, ಸತೀಶ ಜಾರಕಿಹೊಳಿ ಫೌಂಡೇಶನ್ ಹಾಗೂ ಶ್ರೀ ವಿವೇಕಾನಂದ ಯೋಗ ಮತ್ತು ಸಂಸ್ಕೃತಿ ವಿಕಾಸ ಸಂಘ ಗೋಕಾಕ ಇವರುಗಳ ಸಹಯೋಗದಲ್ಲಿ ವೀರಸನ್ಯಾಸಿ ಸ್ವಾಮಿ ವಿವೇಕಾನಂದರ 162ನೇ ಜನ್ಮದಿನೋತ್ಸವದ ಪ್ರಯುಕ್ತ ಜ. 12ರಂದು 3ನೇ ಕರ್ನಾಟಕ ರಾಜ್ಯ ಯೋಗಾಸನ ಸ್ಪೋರ್ಟ್ಸ್ ಲೀಗ್ ಸ್ಪರ್ಧೆಗಳು ಜರುಗಲಿವೆ.

ಸ್ಪರ್ಧೆಗಳು ಬೆಳಗಾವಿ ಜಿಲ್ಲೆಯ ಗೋಕಾಕ ನಗರದ ಎಚ್.ಕೆ.ಜಿ.ಎನ್. ಕಲ್ಯಾಣ ಮಂಟಪ (ನಾಯಕ ಸ್ಟುಡೆಂಟ್ಸ್ ಫೆಡರೇಶನ್ ಹಾಸ್ಟೆಲ್ ಹತ್ತಿರ) ದಲ್ಲಿ ಸ್ಪರ್ಧಿಗಳ ವಯೋಮಿತಿ ಆಧಾರದ ಮೇರೆಗೆ ಸ್ತ್ರೀ-ಪುರುಷರಿಗೆ ಪ್ರತ್ಯೇಕವಾಗಿ ಒಟ್ಟು 14 ವಿಭಾಗಗಳಲ್ಲಿ ನಡೆಯುವವು.

3ನೇ ಕರ್ನಾಟಕ ರಾಜ್ಯ ಯೋಗಾಸನ ಸ್ಪೋರ್ಟ್ಸ್ ಲೀಗ್ ಕಾರ್ಯಕ್ರಮದ ಉದ್ಘಾಟನೆಯನ್ನು ಲೋಕೋಪಯೋಗಿ ಇಲಾಖೆ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ನೆರವೇರಿಸುವರು. ಅಧ್ಯಕ್ಷತೆಯನ್ನು ಶಾಸಕ ಬಾಲಚಂದ್ರ ಜಾರಕಿಹೊಳಿ ವಹಿಸಲಿರುವರು.

ಚಿಕ್ಕೋಡಿ ಸಂಸದೆ ಪ್ರಿಯಾಂಕಾ ಜಾರಕಿಹೊಳಿ, ಕರ್ನಾಟಕ ರಾಜ್ಯ ಅಮೆಚೂರ್ ಯೋಗ ಸ್ಪೋರ್ಟ್ಸ್ ಅಸೋಸಿಯೇಶನ್ ಅಧ್ಯಕ್ಷ ಜಿ.ಎನ್. ಕೃಷ್ಣಮೂರ್ತಿ ಹಾಗೂ ಸ್ವಾಮಿ ವಿವೇಕಾನಂದ ಯೋಗ ಮತ್ತು ಸಾಂಸ್ಕೃತಿಕ ವಿಕಾಸ ಸಂಘದ ಅಧ್ಯಕ್ಷ ಆನಂದ ತೋರಗಾಂವಿ ಉಪಸ್ಥಿತರಿರುವರು ಎಂದು ಗದಗ ಜಿಲ್ಲಾ ಅಮೆಚೂರ್ ಯೋಗಾಸನ ಸ್ಪೋರ್ಟ್ಸ್ ಅಸೋಸಿಯೇಶನ್ ಅಧ್ಯಕ್ಷ ಕೆ.ಎಸ್. ಪಲ್ಲೇದ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೈಕುಂಠ ಏಕಾದಶಿ ನಿಮಿತ್ತ ವಿಶೇಷ ಪೂಜೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿಯ ಶ್ರೀ ವೆಂಕಟೇಶ್ವರ ದೇವಸ್ಥಾನದಲ್ಲಿ ಜ.10ರಂದು ವೈಕುಂಠ ಏಕಾದಶಿಯನ್ನು ವಿಜೃಂಭಣೆಯಿಂದ ನೆರವೇರಿಸಲು ದೇವಸ್ಥಾನದ ಆಡಳಿತ ಮಂಡಳಿಯು ನಿರ್ಧರಿಸಿದೆ. ವೇದಮೂರ್ತಿ ಶ್ರೀ ರತ್ನಾಕರ ಭಟ್ ಇವರ ಉಪಸ್ಥಿತಿಯಲ್ಲಿ, ದೇವಸ್ಥಾನದಲ್ಲಿ ಬ್ರಾಹ್ಮೀ ಮುಹೂರ್ತದ ವೇಳೆ ಶ್ರೀಹರಿಗೆ ಮಹಾಭಿಷೇಕ, ಶ್ರೀವಿಷ್ಣು ಸಹಸ್ರನಾಮ ಮತ್ತು ತುಳಸಿ ಸರ್ವಲಂಕಾರ ಹಾಗೂ ಮಂತ್ರಘೋಷಗಳಿಂದ ಮಹಾ ಮಂಗಳಾರತಿ ನಡೆಯುತ್ತದೆ.



ಪೂಜೆಗೆ ದಂಪತಿ ಸಮೇತವಾಗಿ ಬರುವ ಭಕ್ತರಿಂದ ಪುಷ್ಪಾರ್ಚನೆ ನಡೆಯುತ್ತದೆ. ಆಂಜನೇಯ, ಗರುಡದೇವ ಹಾಗೂ ನವಗ್ರಹಗಳಿಗೆ ವಿಶೇಷ ಪೂಜೆ ಸಲ್ಲುತ್ತದೆ. ರಾತ್ರಿ 8 ಗಂಟೆಯವರೆಗೂ ದೇವರ ದರ್ಶನಕ್ಕೆ ಅವಕಾಶವಿದೆ. ಆದ್ದರಿಂದ ಸವಿತಾ ಸಮಾಜದ ಸರ್ವ ಬಳಗ ಮತ್ತು ಸಮಸ್ತ ಸದ್ಭಕ್ತರು ಈ ಪುಣ್ಯ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಪುನೀತರಾಗಬೇಕು ಹಾಗೂ ತನು-ಮನ-ಧನದಿಂದ ಭಾಗವಹಿಸಿ ಶ್ರೀ ದೇವರ ಕೃಪೆಗೆ ಪಾತ್ರರಾಗಬೇಕೆಂದು ಸಮಾಜದ ಹಿರಿಯರಾದ ರಾಜು ಗೌಡರ, ಪಾಂಡಪ್ಪ ರಾಂಪೂರ, ಮಲ್ಲೇಶಪ್ಪ ಎಮ್.ರಾಂಪೂರ, ದೇವಸ್ಥಾನ ಟ್ರಸ್ಟ್ ಕಮಿಟಿಯ ಅಧ್ಯಕ್ಷರಾದ ಗಂಗಣ್ಣ ಗೌಡರ, ಪದಾಧಿಕಾರಿಗಳಾದ ಸತೀಶ ರಾಂಪೂರ, ಮಧುರಾಜ್ ಎಮ್.ರಾಂಪೂರ, ಮುರಳಿ ವಲ್ಲೂರ, ವೆಂಕಟೇಶ ರಾಂಪೂರ, ರಾಜು ರಾಂಪೂರ, ಶೇಖರ ನ್ಯಾವಿ, ವೆಂಕಟೇಶ ಬಳ್ಳಾರಿ, ಶ್ರೀಧರ ರಘುನಾಥನಳ್ಳಿ, ಮಂಜು ಗೌಡರ, ರಾಘವೇಂದ್ರ ಗೌಡರ ವಿನಂತಿಸಿದ್ದಾರೆ.

## ಮದರಸಾಗಳಲ್ಲಿ ಸಂಸ್ಕೃತ ಕಡ್ಡಾಯ: ವಿದ್ವಾಂಸರ ಅಸಮಾಧಾನ

■ವಿಜಯಸಾಕ್ಷಿ ಸುದ್ದಿ, ಡೆಹ್ರಾಡೂನ್

ಉತ್ತರಾಖಂಡ ಸರ್ಕಾರವು ರಾಜ್ಯಾದ್ಯಂತ ಮದರಸಾಗಳಲ್ಲಿ ಹೊಸ ಶೈಕ್ಷಣಿಕ ವರ್ಷದಿಂದ ಸಂಸ್ಕೃತವನ್ನು ಪಠ್ಯಕ್ರಮದ ಭಾಗವಾಗಿ ಕಡ್ಡಾಯ ಎಂದು ಪ್ರಕಟಣೆ ಹೊರಡಿಸಿದ್ದು, ಸರಕಾರದ ಈ ನಡೆಗೆ ವಿದ್ವಾಂಸರು ವಿರೋಧಿಸಿದ್ದಾರೆ.

ಈ ನಿರ್ಧಾರವು ಧಾರ್ಮಿಕ ಶಿಕ್ಷಣದ ರಚನೆಯಲ್ಲಿ ಬದಲಾವಣೆಯನ್ನು ಸೂಚಿಸುವುದು ಮಾತ್ರವಲ್ಲದೆ, ಮಕ್ಕಳು ಹಿಂದಿ, ಇಂಗ್ಲಿಷ್, ಅರೇಬಿಕ್, ಉರ್ದು ಕಲಿಯುವುದರ ಜೊತೆಗೆ ಈಗ ಸಂಸ್ಕೃತದಂತಹ ಹೆಚ್ಚುವರಿ ಭಾಷೆಯನ್ನು ಕಲಿಯಬೇಕಿದೆ ಎಂದು ಅವರು ತಮ್ಮ ಅಸಮಾಧಾನವನ್ನು ವ್ಯಕ್ತಪಡಿಸಿದ್ದಾರೆ.

ಸಾಂಪ್ರದಾಯಿಕವಾಗಿ ಅರೇಬಿಕ್ ಮತ್ತು ಉರ್ದುವನ್ನು ಕೇಂದ್ರೀಕರಿಸುವ ಉತ್ತರಾಖಂಡದ ಮದರಸಾಗಳು ವಿದ್ಯಾರ್ಥಿಗಳಿಗೆ ಸಂಸ್ಕೃತವನ್ನು ಸಹ ಬೋಧಿಸಬೇಕಿದೆ. ಮದರಸಾ ವಿದ್ಯಾರ್ಥಿಗಳು ತಮ್ಮ ಭಾಷಾ ಕೌಶಲ್ಯವನ್ನು ವಿಸ್ತರಿಸಲು ಇದು ಒಂದು ಅವಕಾಶವೆಂದು ರಾಜ್ಯ ಸರ್ಕಾರವು ಪರಿಗಣಿಸಿದೆ. ಇದರಿಂದಾಗಿ ಅವರು ಧಾರ್ಮಿಕ ಪಠ್ಯಗಳ ಜ್ಞಾನವನ್ನು ಮಾತ್ರವಲ್ಲದೆ ದೇಶದ ನಾಗರಿಕತೆಯ ಸಾಂಸ್ಕೃತಿಕ ಮತ್ತು ಐತಿಹಾಸಿಕ ಅಂಶಗಳೊಂದಿಗೆ ಹೆಚ್ಚು ಪರಿಣಾಮಕಾರಿಯಾಗಿ ತೊಡಗಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಸರಕಾರ ಹೇಳಿದೆ.

ಆದಾಗ್ಯೂ, ಸರ್ಕಾರದ ನಿರ್ಧಾರವನ್ನು ಈ ಪ್ರದೇಶದ ಉಲೇಮಾಗಳು (ಇಸ್ಲಾಮಿಕ್ ವಿದ್ವಾಂಸರು) ಮತ್ತು ಮದರಸಾ ಮುಖ್ಯಸ್ಥರಲ್ಲಿ ಮಿಶ್ರ ಪ್ರತಿಕ್ರಿಯೆಗಳನ್ನು ಹುಟ್ಟುಹಾಕಿದೆ.

ಮದರಸಾಗಳಲ್ಲಿ ಸಂಸ್ಕೃತವನ್ನು ಕಲಿಸುವುದರಿಂದ ಯಾವುದೇ ಅಂತರ್ಗತ ಹಾನಿ ಇಲ್ಲ ಎಂದು ಉಲೇಮಾಗಳು ಹೇಳಿದ್ದಾರೆ. ಆದರೆ ಅದನ್ನು ಕಡ್ಡಾಯ ವಿಷಯವನ್ನಾಗಿ ಮಾಡುವ ಬಗ್ಗೆ ಅವರು ಆಕ್ಷೇಪಣೆಗಳನ್ನು ವ್ಯಕ್ತಪಡಿಸಿದ್ದಾರೆ. ಸಂಸ್ಕೃತದ ಪರಿಚಯವನ್ನು ಮದರಸಾ ವಿದ್ಯಾರ್ಥಿಗಳ ಮೇಲೆ ಹೇರಬಾರದು, ಬದಲಿಗೆ ಅದನ್ನು ಐಚ್ಛಿಕ ವಿಷಯವಾಗಿ ಲಭ್ಯವಾಗುವಂತೆ ಮಾಡಬೇಕು ಎಂದು ಪ್ರಮುಖ ಇಸ್ಲಾಮಿಕ್ ವಿದ್ವಾಂಸರು ಹೇಳಿದ್ದಾರೆ.


**ಕರ್ನಾಟಕ ನೀರಾವರಿ ನಿಗಮ ನಿಯಮಿತ**
(ಕರ್ನಾಟಕ ಸರ್ಕಾರದ ಉದ್ಯಮ)
ಕಾರ್ಯಪಾಲಕ ಅಭಿಯಂತರರವರ ಕಛೇರಿ, ಕರ್ನಾಟಕ ನೀರಾವರಿ ನಿಗಮ ನಿಯಮಿತ,
ಸಿಂಗಟಾಲೂರು ಏತ ನೀರಾವರಿ ಯೋಜನೆ, ವಿಭಾಗ ನಂ.1, ಮುಂಡರಗಿ, ಗದಗ ಜಿಲ್ಲೆ.
Ph. No. 08371-295016 e-mail: eeslis1mdg@gmail.com

**ಟೆಂಡರ್ ಪ್ರಕಟಣೆ**
**(ONLY THROUGH "e-Procurement" SYSTEM)**

**ಉಲ್ಲೇಖ:** 1. ಈ ಕಛೇರಿ ಟೆಂಡರ್ ಪ್ರಕಟಣೆ ಪತ್ರ ಸಂಖ್ಯೆ: 1439/2024-25 ದಿನಾಂಕ: **06.01.2025** ಸಿಂಗಟಾಲೂರು ಏತ ನೀರಾವರಿ ಯೋಜನೆಯ ಮುಂಡರಗಿ ವಿಭಾಗ-01 ಕಛೇರಿಯಡಿ ಬರುವ ಹಿರೇಹಳ್ಳ ಯೋಜನೆಯ ವ್ಯಾಪ್ತಿಯಲ್ಲಿ ಬರುವ ಕೆಳಕಂಡ ಕಾಮಗಾರಿಗೆ ಉಲ್ಲೇಖ(1) ರಂತೆ ದ್ವಿ-ಲಕೋಟೆ ಪದ್ಧತಿಯಲ್ಲಿ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ.

| Sl. No | Name of work | Amount put to tender (Rs. in Lakhs) | EMD (in Rs.) |
|---|---|---|---|
| 1. | Consultancy services for survey, investigation, hydrological study, assessment of flood, preparation of DPR, Designs, Drawings and Estimates for flood control and flood management for Virapur Halla tributary of Hirehalla in Yelburga Taluk Koppal District. (Indent No. KNNL/2024-25/OW/WORK_INDENT2557) | 49.62 (Including GST) | 125000/- |

ಇನ್ನುಳಿದಂತೆ, ಸದರಿ ಟೆಂಡರಿಗೆ ಸಂಬಂಧಿಸಿದ ಷರತ್ತು/ನಿಯಮಾವಳಿಗಳ ಮಾಹಿತಿಯನ್ನು ಕೆಳಗೆ ಸಹಿ ಮಾಡಿರುವ ಅಧಿಕಾರಿಯವರ ಕಛೇರಿಯಿಂದ ಕಛೇರಿ ವೇಳೆಯಲ್ಲಿ ಪಡೆಯಬಹುದಾಗಿದೆ ಹಾಗೂ ದಿನಾಂಕ: **08.01.2025** ರ ನಂತರ **"https://kppp.karnataka.gov.in"** ವೆಬ್‌ಸೈಟ್‌ನಲ್ಲಿ ಟೆಂಡರ್ ಡಾಕ್ಯೂಮೆಂಟ್ ಅನ್ನು ಡೌನ್‌ಲೋಡ್ ಮಾಡಿಕೊಂಡು ಬಿಡ್‌ನ್ನು ಸಲ್ಲಿಸಬಹುದಾಗಿರುತ್ತದೆ. ಸದರಿ ಕಾಮಗಾರಿಯ ಟೆಂಡರ್‌ಗೆ ಬಿಡ್ಡನ್ನು ಸಲ್ಲಿಸಲು ಕೊನೆಯ ದಿನಾಂಕ: **23.01.2025** ಎಂದು ಮತ್ತು ಟೆಂಡರ್ ತಾಂತ್ರಿಕ ಬಿಡ್ಡನ್ನು ತೆರೆಯುವ ದಿನಾಂಕ: **24.01.2025** ಎಂದು ನಿಗದಿಪಡಿಸಿದೆ. ಇನ್ನಿತರೆ ಹೆಚ್ಚಿನ ಮಾಹಿತಿಯನ್ನು **e-procurement Helpdesk Phone No's: +91-80-46010000, +91-80-68948777** ಅನ್ನು ಸಂಪರ್ಕಿಸಿ ಪಡೆಯಬಹುದಾಗಿದೆ. ನಿಬಂಧನೆಗೊಳಪಟ್ಟ ಟೆಂಡರ್‌ಗಳನ್ನು ತಿರಸ್ಕರಿಸಲಾಗುವುದು. ಟೆಂಡರ್‌ಗಳನ್ನು ಸ್ವೀಕರಿಸುವ ಅಧಿಕಾರ ಪಡೆದಿರುವ ಅಧಿಕಾರಿಯು ಎಲ್ಲಾ ಅಥವಾ ಯಾವುದೇ ಟೆಂಡರ್‌ನ್ನು ಕಾರಣ ನೀಡದೆ ತಿರಸ್ಕರಿಸುವ ಅಧಿಕಾರವನ್ನು ಹೊಂದಿರುತ್ತಾರೆ.

ಸಹಿ/- ಕಾರ್ಯಪಾಲಕ ಅಭಿಯಂತರರು,
ಸಿಂಗಟಾಲೂರು ಏತ ನೀರಾವರಿ ಯೋಜನೆ,
ನಂ. 1 ವಿಭಾಗ, ಕರ್ನಾಟಕ ನೀರಾವರಿ ನಿಗಮ ನಿಯಮಿತ,
ಮುಂಡರಗಿ, ಗದಗ ಜಿಲ್ಲೆ.

ವಾ.ಸಾ.ಇ/ಗದಗ/527/ದೇಶಪಾಂಡೆಪಬ್ಲಿಸಿಟಿ/2024-25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka